ಮಂಗಳವಾರ 11.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 96
Digital Varthe Kannada Daily
Volume 01 - Issue 96
Tuesday11.11.2025
Price: 5/- Rs
2 Pages Bangalore
PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಯುವಕನೊಂದಿಗೆ ಮೂರು ಮಕ್ಕಳ ತಾಯಿ ಕಾಮದಾಟ - ಅಡ್ಡಿಯಾದ ಗಂಡನಿಗೆ ಕಟ್ಟಿದ್ರು ಚಟ್ಟ !





**ಲಕ್ನೋ:** ಪ್ರೀತಿ ಎಂಬುದು ಮಾಯೆ.. ಈ ಪ್ರೀತಿಗೆ ಕಣ್ಣಿಲ್ಲ ಅಂತಾರೆ ನಿಜ, ಆದ್ರೆ ಕೆಲವೊಮ್ಮೆ ಪ್ರೀತಿಗೆ ಹೃದಯವೂ ಇರೋದಿಲ್ಲ, ಅದು ತನ್ನ ಪ್ರೇಮಿಯನ್ನ ಬಿಟ್ಟು ಉಳಿದವರಿಗೆ ಕಲ್ಪನೆಷ್ಟೇ ಕಠೋರವಾಗಿರುತ್ತೆ. ಆದ್ರೆ ಇತ್ತೀಚಿನ ದಿನಗಳಲ್ಲಿ ಕೆಲ ಮಹಿಳೆಯರು ಕಾಮದಾಸೆಗೆ ಬಿದ್ದು ಸಪ್ತಪದಿ ತುಳಿದ ಗಂಡನನ್ನೇ ಕೊಲ್ಲುವ ಹಂತಕ್ಕೆ ತಲುಪುತ್ತಿದ್ದಾರೆ. ಇದಕ್ಕೆ ಮೀರತ್‌ನಲ್ಲಿ ನಡೆದ ಪ್ರಕರಣ ತಾಜಾ ಉದಾಹರಣೆಯಾಗಿದೆ.

ಹೌದು. ಉತ್ತರ ಪ್ರದೇಶದಲ್ಲಿ ಕಾಜಲ್ ಎಂಬ ಮಹಿಳೆ ತನ್ನ ಪ್ರಿಯಕರನಿಗಾಗಿ ಕೈಹಿಡಿದ ಗಂಡನನ್ನೇ ಕೊಂದು ಶವವನ್ನ ಕಾಲುವೆಗೆ ಎಸೆದಿರುವುದು ತಡವಾಗಿ ಬೆಳಕಿಗೆ ಬಂದಿದೆ. ರೋಚಕ ಪ್ರಕರಣವನ್ನ ಭೇದಿಸಿದ ಮೀರತ್‌ನ ರೋಹ್ತಾ ಪೊಲೀಸರು ಆರೋಪಿ ಪತ್ನಿ, ಆಕೆಯ ಪ್ರಿಯಕರ ಹಾಗೂ ಅವನ ಇಬ್ಬರು ಸಹಚರರನ್ನ ಬಂಧಿಸಿದ್ದಾರೆ.

**ಅನುಮಾನ ಹುಟ್ಟಿದ್ದು ಯಾವಾಗ?**

ಈ ಪ್ರಕರಣ ರೋಹ್ತಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿದೆ. ರಸೂಲ್‌ಪುರ ಗ್ರಾಮದ ನಿವಾಸಿ ಅನಿಲ್ (32) ಸುಮಾರು ಎಂಟು ವರ್ಷಗಳ ಹಿಂದೆ ಕಾಜಲ್ ಎಂಬಾಕೆಯನ್ನ ವಿವಾಹವಾಗಿದ್ದರು, ದಂಪತಿಗೆ ಮೂರು ಮಕ್ಕಳಿದ್ದಾರೆ. ಆದ್ರೆ ಕಳೆದ ಅ.26 ರಂದು ಅನಿಲ್ ನಾಪತ್ತೆಯಾಗಿರುವುದಾಗಿ ಆತನ ಸಹೋದರ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದ. ಪ್ರಕರಣ ದಾಖಲಿಸಿಕೊಂಡು ತನಿಖೆಗಿಳಿದ ಪೊಲೀಸರಿಗೆ ಸಣ್ಣ ಸುಳಿವೂ ಸಿಕ್ಕಿರಲಿಲ್ಲ. ಆ ನಂತ್ರ ನವೆಂಬರ್ 5 ರಂದು ಅನಿಲ್ ಸಹೋದರನ ಪತ್ನಿ ಕಾಜಲ್, ಪ್ರಿಯಕರ ಆಕಾಶ್ ಹಾಗೂ ಆತನ ಸ್ನೇಹಿತ ಸೇರಿ ಕೊಲೆ ಮಾಡಿರುವುದಾಗಿ ಆರೋಪಿಸಿ ಹೊಸ ದೂರು ನೀಡಿದ್ದ. ಬಳಿಕ ಪ್ರಕರಣ ತಿರುವು ಪಡೆದುಕೊಂಡಿತು. ತನಿಖೆ ವೇಳೆ ಕಾಮದಾಟ ಬಯಲು

ಪೊಲೀಸರ ತನಿಖೆಯಲ್ಲಿ, ಅನಿಲ್ ಪತ್ನಿ, ಕಾಜಲ್ ಅದೇ ಗ್ರಾಮದ ಆಕಾಶ್ ಎಂಬ ಯುವಕನೊಂದಿಗೆ ಚಕ್ಕಂದ ಆಡ್ತಿದ್ಳು. ಇದು ಗ್ರಾಮಸ್ಥರಿಗೂ ಗೊತ್ತಾಗಿ, ಪಂಚಾಯ್ತಿ ಸೇರಿಸಿದ್ರು. ಆದ್ರೆ ಮರ್ಯಾದೆ ಹೋಗುತ್ತೆ ಅನ್ನೋ ಕಾರಣಕ್ಕೆ ಅನಿಲ್ ಕುಟುಂಬ ಈ ವಿಷಯವನ್ನ ಒಪ್ಪಿಕೊಳ್ಳದೇ ಮುಚ್ಚಿಟ್ಟರು, ಬಳಿಕ ಪಂಚಾಯ್ತಿಯಲ್ಲಿ ಕಾಜಲ್‌ಗೆ ಬುದ್ಧಿ ಹೇಳಿ ಕಳಿಸಲಾಗಿತ್ತು. ಇದಾದಮೇಲೂ ಕಾಜಲ್ ಮತ್ತು ಆಕಾಶ್ ರಹಸ್ಯವಾಗಿ ಸೇರುತ್ತಿದ್ರು.. ಪರಸ್ಪರ ಭೇಟಿ ಆಗೋದನ್ನ ಮುಂದುವರಿಸಿದ್ರು. ಅನಿಲ್ ಕೆಲಸಕ್ಕೆ ಹೋದ ಮೇಲೆ ಕಾಜಲ್ ಆಕಾಶ್ ಜೊತೆ ಸೇರಿ ಕಾಮದಾಟವಾಡುತ್ತಿದ್ಳು. ಇದೆಲ್ಲವೂ ತನಿಖೆ ವೇಳೆ ಬಯಲಾಗಿದೆ ಎಂದು ರೋಹ್ತಾ ಎಸ್ಪಿ ತಿಳಿಸಿದ್ದಾರೆ.

**ಕರಾಳ ರಾತ್ರಿಯಲ್ಲಿ ನಡೆದಿದ್ದೇನು?**

ಕಾಜಲ್‌ನ ಕಳ್ಳ ಸಂಬಂಧ ಮತ್ತೆ ಅನಿಲ್‌ಗೆ ಗೊತ್ತಾದಾಗ ಅವನನ್ನೇ ಮುಗಿಸಲು ಪ್ಲ್ಯಾನ್ ಮಾಡಿದ್ರು. ಮೊದಲು ಕಾಜಲ್ ರಾತ್ರಿ ಊಟದಲ್ಲಿ ಮತ್ತು ಬರುವ ಔಷಧಿ ಬೆರಸಿ ಕೊಟ್ಟಿದ್ಳು. ಅನಿಲ್ ಪ್ರಜ್ಞೆ ತಪ್ಪಿದಾಗ, ಮೊದಲೇ ಪ್ಲ್ಯಾನ್ ಮಾಡಿದಂತೆ ತನ್ನ ಸ್ನೇಹಿತನೊಟ್ಟಿಗೆ ಬಂದ ಆಕಾಶ್, ಅನಿಲ್‌ನನ್ನ ಬೈಕ್‌ನಲ್ಲಿ ಸಿವಾಲ್ ಖಾಸ್ ಗ್ಯಾಂಗ್ ಕಾಲುವೆ ಬಳಿಗೆ ಕರೆದೊಯ್ದು, ಅಲ್ಲಿ ಕಾಜಲ್ ಸ್ಕಾರ್ಫ್‌ನಿಂದ ಕುತ್ತಿಗೆ ಹಿಸುಕಿದರು, ಆದ್ರೆ ಅನಿಲ್ ಸಂಪೂರ್ಣವಾಗಿ ಸತ್ತಿರಲಿಲ್ಲ. ಅನಿಲ್ ಇನ್ನೂ ಉಸಿರಾಡುತ್ತಿರುವುದನ್ನ ಕಂಡ ಆಕಾಶ್ ಕಾಲುವೆಗೆ ಎಸೆದ. ಬಳಿಕ ಕಾಜಲ್ ಆ ಸ್ಕಾರ್ಫ್‌ಅನ್ನು ಅಲ್ಲೇ ಇದ್ದ ಪೊದೆಗೆ ಎಸೆದಿದ್ದಳು. ಪೊಲೀಸರು ಸ್ಥಳ ಪರಿಶೀಲನೆ ನಡೆಸುವಾಗ ಈ ಸ್ಕಾರ್ಫ್ ವಶಪಡಿಸಿಕೊಂಡಿದ್ದರು. ಇದು ಕಾಜಲ್‌ಗೆ ಅಂತ ಗೊತ್ತಾದಾಗ ಆಕೆಯ ಮನೆಯನ್ನ ಜಾಲಾಡಿದ್ರು. ಬಳಿಕ ಮನೆಯಲ್ಲಿ ಮತ್ತು ಬರುವ ಮಾತ್ರೆಯ ಪ್ಯಾಕ್‌ಕೂಡ ಸಿಕ್ಕಿತು. ತೀವ್ರ ವಿಚಾರಣೆ ಬಳಿಕ ಆರೋಪಿಗಳು ಸತ್ಯ ಒಪ್ಪಿಕೊಂಡರು. ಸದ್ಯ ಮೂವರನ್ನು ಬಂಧಿಸಿರುವ ಪೊಲೀಸರು ಮೃತ ಅನಿಲ್ ಶವಕ್ಕಾಗಿ ಹುಡುಕಾಟ ನಡೆಸುತ್ತಿದ್ದಾರೆ.

## ಕೆರೆಯಲ್ಲಿ ಮುಳುಗಿ ಇಬ್ಬರು ಬಾಲಕರ ದುರ್ಮರಣ



**ಬೆಂಗಳೂರು:** ಇಬ್ಬರು ಬಾಲಕರು ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿರುವ ದಾರುಣ ಘಟನೆ ಬೆಂಗಳೂರಿನ ಆನೇಕಲ್ ತಾಲೂಕಿನ ಅತ್ತಿಬೆಲೆ ಸಮೀಪದ ಬಳ್ಳೂರು ಗ್ರಾಮದಲ್ಲಿ ನಡೆದಿದೆ. ನಿನ್ನೆ ಸಂಜೆವರೆಗೂ ಆಟವಾಡುತ್ತಿದ್ದ ಇಬ್ಬರು ಮಕ್ಕಳು ಇಂದು ಬೆಳಿಗ್ಗೆ ಮೃತದೇಹಗಳಾಗಿ ಪತ್ತೆಯಾಗಿದ್ದಾರೆ.

ಮೃತರನ್ನು ಅನಿಕೇತ್ ಕುಮಾರ್ (12) ಹಾಗೂ ರೆಹಮಾತ್ ಬಾಬಾ (11) ಎಂದು ಗುರುತಿಸಲಾಗಿದೆ. ಅನಿಕೇತ್ ಕುಮಾರ್ ಬಿಹಾರ ಮೂಲದವರಾಗಿದ್ದು, ರೆಹಮಾತ್ ಬಾಬಾ ಆಂಧ್ರಪ್ರದೇಶದ ಕದಿರಿ ಮೂಲದವನೆಂದು ಪೊಲೀಸರು ತಿಳಿಸಿದ್ದಾರೆ. ಕಾರ್ಮಿಕರ ಮಕ್ಕಳಾದ ಇವರು, ಇಬ್ಬರೂ ಕೂಲಿ ಕೆಲಸ ಮಾಡಿಕೊಂಡು ಬಳ್ಳೂರು ಗ್ರಾಮದ ಬಳಿ ವಾಸಿಸುತ್ತಿದ್ದರು.

ನಿನ್ನೆ ಸಂಜೆ ಅನಿಕೇತ್ ಮತ್ತು ರೆಹಮಾತ್ ತಮ್ಮ ಮನೆಗಳ ಹತ್ತಿರದ ಆವರಣದಲ್ಲಿ ಆಟವಾಡುತ್ತಿದ್ದರು. ಆಟದ ಮಧ್ಯೆ, ಇಬ್ಬರೂ ಗ್ರಾಮದ ಕೆರೆಯತ್ತ ತೆರಳಿದ್ದಾರೆ. ಈ ವೇಳೆ ಕೆರೆಗೆ ಇಳಿದ ಮಕ್ಕಳು ಈಜು ಬಾರದೇ ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವುದಾಗಿ ಪೊಲೀಸರು ಶಂಕಿಸಿದ್ದಾರೆ.

ಸಂಜೆ ವೇಳೆಯಾದರೂ ಮಕ್ಕಳು ಮನೆಗೆ ಹಿಂತಿರುಗದಿರುವುದು ಪೋಷಕರಲ್ಲಿ ಅನುಮಾನ ಮೂಡಿದ್ದು, ಆತಂಕಗೊಂಡ ಪೋಷಕರು ಹಾಗೂ ನೆರೆಮನೆಯವರು ರಾತ್ರಿ ಪೂರ್ತಿ ಹುಡುಕಾಟ ನಡೆಸಿದರೂ ಯಾವುದೇ ಸುಳಿವು ಸಿಕ್ಕಿರಲಿಲ್ಲ.

ಇಂದು ಬೆಳಿಗ್ಗೆ ಗ್ರಾಮಸ್ಥರು ಕೆಲವರು ಕೆರೆಯ ಬಳಿ ಹೋದಾಗ ನೀರಿನಲ್ಲಿ ಎರಡು ಮೃತದೇಹಗಳು ತೇಲುತ್ತಿರುವುದನ್ನು ಗಮನಿಸಿದ್ದಾರೆ. ತಕ್ಷಣವೇ ಅವರು ಅತ್ತಿಬೆಲೆ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ಪೊಲೀಸರು ಸ್ಥಳಕ್ಕೆ ಧಾವಿಸಿ, ಅಗ್ನಿಶಾಮಕ ಸಿಬ್ಬಂದಿಯ ಸಹಾಯದಿಂದ ಮೃತದೇಹಗಳನ್ನು ಹೊರತೆಗೆದಿದ್ದಾರೆ. ನಂತರ ಅವುಗಳನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಕಳುಹಿಸಲಾಗಿದೆ. ಅತ್ತಿಬೆಲೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಣ್ಣ ಸ್ಕರ್ಟ್ ಹಾಕಿದ್ರೆ ನಿನ್ನ ಮೇಲೆ ಅತ್ಯಾಚಾರ ಮಾಡ್ತೀನಿ

**ಬೆಂಗಳೂರು:** ಬೆಂಗಳೂರು ಮಹಿಳೆಯರ ಸುರಕ್ಷತೆ ವಿಚಾರದಲ್ಲಿ ದಿನದಿಂದ ದಿನಕ್ಕೆ ಆತಂಕ ಮೂಡಿಸುತ್ತಿದೆ. ಇದೀಗ ಯುವತಿಯೊಬ್ಬಳು ಕೇವಲ ಸ್ಕರ್ಟ್ ಧರಿಸಿದ್ದಕ್ಕಾಗಿ ಆಟೋ ಚಾಲಕನೊಬ್ಬ ಅತ್ಯಾಚಾರ ಎಸಗುವುದಾಗಿ ಬೆದರಿಕೆ ಹಾಕಿದ ಘಟನೆ ಇಂದಿರಾನಗರದಲ್ಲಿ ನಡೆದಿದೆ. ಈ ಘಟನೆಯನ್ನು ಆಕೆ ಸೋಶಿಯಲ್ ಮೀಡಿಯಾ ಪ್ಲಾಟ್‌ಫಾರ್ಮ್‌ನಲ್ಲಿ ಹಂಚಿಕೊಂಡಿದ್ದು, ಸಾರ್ವಜನಿಕರಲ್ಲಿ ಆಕ್ರೋಶ ಮತ್ತು ಆತಂಕವನ್ನು ಹುಟ್ಟುಹಾಕಿದೆ.

ಮಧ್ಯಾಹ್ನ ಸುಮಾರು 3 ಗಂಟೆಯ ವೇಳೆಗೆ ಯುವತಿ ಮತ್ತು ಅವಳ ಸ್ನೇಹಿತ (ಯುವಕ) ಇಂದಿರಾನಗರಕ್ಕೆ ಆಟೋದಲ್ಲಿ ಪ್ರಯಾಣಿಸುತ್ತಿದ್ದರು. ಆಟೋದಿಂದ ಇಳಿದ ಯುವತಿ ಮತ್ತು ಸ್ನೇಹಿತ ಅಲ್ಲಿಂದ ಹೊರಟರು. ಆದರೆ ಸ್ವಲ್ಪ ದೂರ ಹೋದ ಬಳಿಕ ಚಾಲಕ ಮತ್ತೆ ಬಂದು ಬಯ್ಯಲು ಆರಂಭಿಸಿದನು. “ಯಾಕೆ ಏನಾಯ್ತು ನಿಮಗೆ?” ಎಂದು ಸ್ನೇಹಿತ ಪ್ರಶ್ನಿಸಿದಾಗ, ಚಾಲಕ ನೇರವಾಗಿ ಯುವತಿಯತ್ತ ತಿರುಗಿ, “ಯಾಕೆ ಇಷ್ಟು ಸಣ್ಣ ಸ್ಕರ್ಟ್ ಹಾಕಿದ್ದೀಯಾ?” ಎಂದು ಕೇಳಿದನು.

ಇದಕ್ಕೆ ಸ್ನೇಹಿತ ತಕ್ಷಣವೇ ಉತ್ತರಿಸಿದನು, “ಅದು ಅವಳ ಇಷ್ಟ. ಅವಳಿಗೆ ಹೇಗೆ ಬೇಕೋ ಹಾಗೆ ಬಟ್ಟೆ ಹಾಕುತ್ತಾಳೆ, ನಿಮಗೇನು ಕಷ್ಟ?” ಎಂದನು. ಆದರೆ ಆಟೋ ಚಾಲಕ, “ಅವಳು ಇದೇ ತರಹದ ಬಟ್ಟೆ ಧರಿಸಿದರೆ ಜನರು ಅವಳ ಮೇಲೆ ಅತ್ಯಾಚಾರ ಮಾಡುತ್ತಾರೆ. ನಾನು ಕೂಡ ಆಕೆಯ ಮೇಲೆ ರೇಪ್ ಮಾಡಿಬಿಡ್ತೇನೆ!” ಎಂದು ಹೇಳಿದನು. ಈ ಮಾತುಗಳು ಯುವತಿ ಮತ್ತು ಸ್ನೇಹಿತರನ್ನು ಬೆಚ್ಚಿಬೀಳಿಸಿದವು. ಮಧ್ಯಾಹ್ನದ ಬಿಸಿಲಿನಲ್ಲಿ, ಜನಸಂದಣಿ ಇರುವ ಪ್ರದೇಶದಲ್ಲಿ, ಯುವಕನ ಸಮ್ಮುಖದಲ್ಲೇ ಇಂತಹ ದೌರ್ಜನ್ಯಕ್ಕೆ ಒಳಗಾಗಿರುವುದು ನಿಜಕ್ಕೂ ಆತಂಕದ ಸಂಗತಿ.

ಪರಿಸ್ಥಿತಿ ಉಲ್ಬಣಗೊಳ್ಳುತ್ತಿದ್ದಂತೆ ಸುತ್ತಮುತ್ತಲಿನ ಜನರು ಸೇರಲು ಶುರುವಾಯಿತು. ಗುಂಪು ಕೂಡುತ್ತಿದ್ದಂತೆ ಚಾಲಕ ಹೆದರಿ ಅಲ್ಲಿಂದ ತಪ್ಪಿಸಿಕೊಂಡು ಹೋದನು. ಯುವತಿಯು ತನ್ನ ಅನುಭವವನ್ನು ಹಂಚಿಕೊಳ್ಳುತ್ತಾ, “ಮಧ್ಯಾಹ್ನದ ಹೊತ್ತಿನಲ್ಲಿ, ಜನ ಸಂದಣಿ ಇರುವ ಸ್ಥಳದಲ್ಲಿ, ಅದು ಕೂಡ ಒಬ್ಬ ಯುವಕನು ಇರುವಾಗಲೇ, ಒಂದು ಹೆಣ್ಣಿನ ಮೇಲೆ ಈ ರೀತಿಯ ದೌರ್ಜನ್ಯ ನಡೆಸಿರುವುದು ನಿಜಕ್ಕೂ ಆತಂಕ ಮೂಡಿಸಿದೆ” ಎಂದು ಬರೆದುಕೊಂಡಿದ್ದಾರೆ.

## ಯೋಗ ಗುರು ನಿರಂಜನಾ ಮೂರ್ತಿ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಕೆ



**ಬೆಂಗಳೂರು:** ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದಡಿ ಬಂಧನ ವಾಗಿದ್ದ ಯೋಗ ಗುರು ನಿರಂಜನಾ ಮೂರ್ತಿ ವಿರುದ್ಧ ರಾಜರಾಜೇಶ್ವರಿ ನಗರ ಪೊಲೀಸರು ಚಾರ್ಜ್ ಶೀಟ್ ಸಲ್ಲಿಸಿದ್ದಾರೆ.

ಪ್ರಕರಣದ ತನಿಖೆ ಪೂರ್ಣಗೊಳಿಸಿದ ಪೊಲೀಸರು ಪೋಕ್ಸೋ ವಿಶೇಷ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿದ್ದಾರೆ.ಏನಿದು ಕೇಸ್?

ಯೋಗ ಗುರು ನಿರಂಜನಾ ಮೂರ್ತಿ ರಾಜರಾಜೇಶ್ವರಿ ನಗರದಲ್ಲಿ ಯೋಗ ಕೇಂದ್ರವೊಂದನ್ನ (Yoga Centre) ನಡೆಸುತ್ತಿದ್ದ. ಈ ಯೋಗ ಸೆಂಟರ್‌ಗೆ ಓರ್ವ ಅಪ್ರಾಪ್ತೆ ಬರುತ್ತಿದ್ದಳು. ಯೋಗದಲ್ಲಿ ಅಂತಾರಾಷ್ಟ್ರೀಯ ಮಟ್ಟಕ್ಕೆ ಕರೆದೊಯ್ದು, ನಿನ್ನ ಹೆಸರು ಬರುವಂತೆ ಮಾಡುತ್ತೇನೆ. ಅದರಿಂದ ನಿನಗೆ ಸರ್ಕಾರಿ ಕೆಲಸವೂ ಸಿಗಬಹುದು ಎಂದು ನಂಬಿಸಿ, ಅಪ್ರಾಪ್ತೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದ. ಈ ಸಂಬಂಧ ಬಾಲಕಿ ನೀಡಿದ್ದ ದೂರನ್ನಾಧರಿಸಿ ಪೊಲೀಸರು ನಿರಂಜನಾ ಮೂರ್ತಿಯನ್ನ ಬಂಧಿಸಿದ್ದರು.

ತನಿಖೆ ವೇಳೆ ಅಪ್ತಾಪ್ತೆ ಮೇಲೆ ಅತ್ಯಾಚಾರ ಎಸಗಿರೋದಕ್ಕೆ ಸಾಕ್ಷಿ ಲಭ್ಯವಾಗಿದೆ. ಕೆಲ ವಿಡಿಯೋ, ಫೋಟೋಗಳು ಲಭ್ಯವಾಗಿದೆ. ಅಲ್ಲದೇ ಹಲವಾರು ಮಹಿಳೆಯರ ಜೊತೆಗೆ ಲೈಂಗಿಕ ಸಂಪರ್ಕ ಹೊಂದಿರುವುದೂ ತನಿಖೆ ವೇಳೆ ಬೆಳಕಿಗೆ ಬಂದಿದೆ

ಪೊಲೀಸರು ಹಲವಾರು ಮಹಿಳೆಯರನ್ನ ಸಂಪರ್ಕಿಸಿದ್ದರು, ಆದ್ರೆ ಹೇಳಿಕೆ ದಾಖಲಿಸಲು ಮಹಿಳೆಯರು ಹಿಂದೇಟು ಹಾಕಿದ್ದಾರೆ. ಓರ್ವ ಅಪ್ರಾಪ್ತೆ ಹೊರತುಪಡಿಸಿ ಉಳಿದವರು ದೂರು ನೀಡಲು ನಿರಾಕರಿಸಿದ್ದಾರೆ. ಹೀಗಾಗಿ ಓರ್ವ ದೂರುದಾರೆ ನೀಡಿದ ಹೇಳಿಕೆ ಆಧಾರದಲ್ಲೇ ತನಿಖೆ ನಡೆಸಿ ದೋಷಾರೋಪ ಪಟ್ಟಿ ಸಲ್ಲಿಸಿದ್ದಾರೆ. ವಿಧಿ ವಿಜ್ಞಾನ ಪ್ರಯೋಗಾಲಯ ವರದಿ ಇನ್ನಷ್ಟೇ ಬರಬೇಕಿದೆ. ಬಳಿಕ ತೀರ್ಪು ಪ್ರಕಟ ಸಾಧ್ಯತೆಯಿದೆ.

## ಕೇಸ್‌ನಿಂದ ಹೆಸರು ಬಿಡಲು ಲಂಚವಾಗಿ ಶೂ ಪಡೆದ ಪೊಲೀಸರು

**ಲಕ್ನೋ:** ಪ್ರಕರಣದ ಆರೋಪಿಗಳ (Accused) ಪಟ್ಟಿಯಿಂದ ತನ್ನ ಹೆಸರನ್ನು ತೆಗೆದು ಹಾಕಿದ್ದಕ್ಕಾಗಿ ಉತ್ತರ ಪ್ರದೇಶದ ಪೊಲೀಸರು (UP Police) ವ್ಯಾಪಾರಿಯೊಬ್ಬರಿಂದ ನಗದಿನ ಬದಲಾಗಿ 4 ಜೊತೆ ಶೂಗಳನ್ನ ಲಂಚವಾಗಿ ಪಡೆದಿದ್ದಾರೆ.

ರಾಜ್ಯದ ಆಗ್ರಾ ನಗರದಲ್ಲಿ (Agra City) ಪೊಲೀಸರು ವ್ಯಾಪಾರಿಯೊಬ್ಬರ ವಿರುದ್ಧದ ಪ್ರಕರಣದ ತನಿಖೆ ನಡೆಸುತ್ತಿದ್ದರು. ಅದರ ಭಾಗವಾಗಿ ವ್ಯಾಪಾರಿಯ ಹೇಳಿಕೆಯನ್ನ ದಾಖಲಿಸಿ ಹಿರಿಯ ಅಧಿಕಾರಿಗಳಿಗೆ ವರದಿ ಸಲ್ಲಿಸಬೇಕಿತ್ತು. ಆದ್ರೆ, ಪೊಲೀಸರು ವ್ಯಾಪಾರಿಯನ್ನ ಸಂಪರ್ಕಿಸಿ, ಅವರ ಪರವಾಗಿ ವರದಿ ಬರೆಯಲು ಲಂಚವಾಗಿ ಹಣ ಕೇಳಿದ್ದರು.

ವ್ಯಾಪಾರಿಯು, ಹಣ ನೀಡಲು ಸಾಧ್ಯವಿಲ್ಲ ಎಂದಾಗ, 4 ಜೊತೆ ಶೂಗಳನ್ನ ನೀಡುವಂತೆ ಪೊಲೀಸರು ಒತ್ತಾಯಿಸಿದ್ರು. ಹಾಗಾಗಿ ವ್ಯಾಪಾರಿಯು ಅವರಿಗೆ ಶೂಗಳನ್ನ ನೀಡಿದ್ದರು ಎನ್ನಲಾಗಿದೆ. ಭ್ರಷ್ಟಾಚಾರ ವಿರೋಧಿ ಸಹಾಯವಾಣಿ ಸಂಖ್ಯೆಗೆ ದೂರು ಸಲ್ಲಿಸಿದ ನಂತರ ಮೂವರು ಪೊಲೀಸರನ್ನು ಅಮಾನತುಗೊಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

## ಬೈಕ್ ಡಿಕ್ಕಿಯಾಗಿ ರಸ್ತೆಗೆ ಬಿದ್ದ ಮಹಿಳೆ ಕಾರು ಹರಿದು ಸಾವು



**ತುಮಕೂರು:** ಕುಣಿಗಲ್ ತಾಲೂಕಿನ ಕೊತ್ತಗೆರೆ ಬಳಿ ನಡೆದ ದಾರುಣ ರಸ್ತೆ ಅಪಘಾತದಲ್ಲಿ ಮಹಿಳೆ ಮೃತಪಟ್ಟಿದ್ದಾರೆ. ಬೈಕ್ ಗುದ್ದಿದ ಪರಿಣಾಮ ಮಹಿಳೆ ರಸ್ತೆ ಮೇಲೆ ಬಿದ್ದಿದ್ದು, ಹಿಂಬದಿಯಿಂದ ಬಂದ ಕಾರು ಅವರ ಮೇಲೆ ಹರಿದು ಭೀಕರ ಅಂತ್ಯವಾಗಿದೆ.

ಮೃತರನ್ನು ಕೊತ್ತಗೆರೆ ಗ್ರಾಮದ ನಿವಾಸಿ ಗಂಗಮ್ಮ (49) ಎಂದು ಗುರುತಿಸಲಾಗಿದೆ. ಪ್ರತಿ ದಿನದಂತೆ ಸೋಮವಾರ ಬೆಳಿಗ್ಗೆ ಗಂಗಮ್ಮ ರಸ್ತೆ ಬದಿಯಲ್ಲಿ ನಡೆದುಕೊಂಡು ಮನೆಗೆ ತೆರಳುತ್ತಿದ್ದ ವೇಳೆ ವೇಗವಾಗಿ ಬಂದ ಬೈಕ್ ಅವರು ನಡೆದುಕೊಂಡು ಹೋಗುತ್ತಿದ್ದ ದಾರಿಯಲ್ಲೇ ಬಂದು ಗುದ್ದಿದೆ. ಅಪಘಾತದ ಆಘಾತದಿಂದ ಗಂಗಮ್ಮ ರಸ್ತೆ ಮಧ್ಯಕ್ಕೆ ಬಿದ್ದಿದ್ದಾರೆ. ಅದೇ ವೇಳೆಗೆ ಹಿಂಬದಿಯಿಂದ ಬಂದ ಕಾರು ಅವರ ಮೇಲೆ ಹರಿದು ತೀವ್ರವಾಗಿ ಗಾಯಗೊಂಡಿದ್ದಾರೆ. ಸ್ಥಳೀಯರು ಕೂಡಲೇ ಆಸ್ಪತ್ರೆಗೆ ಕರೆದೊಯ್ದರೂ, ಅವರು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.

ಘಟನೆಯಿಂದ ಸ್ಥಳೀಯರಲ್ಲಿ ಶೋಕಸಂತಾಪ ವ್ಯಕ್ತವಾಗಿದೆ. ಸ್ಥಳಕ್ಕೆ ಕುಣಿಗಲ್ ಪೊಲೀಸ್ ಠಾಣಾ ಸಿಬ್ಬಂದಿ ಭೇಟಿ ನೀಡಿ ಪ್ರಕರಣ ದಾಖಲಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ. ಈ ಅಪಘಾತದ ಬಳಿಕ ಬೈಕ್ ಸವಾರ ಸ್ಥಳದಿಂದ ಪರಾರಿಯಾಗಿದ್ದು, ಪೊಲೀಸರ ಶೋಧ ಮುಂದುವರಿದಿದೆ.

## ತಂದೆಯ ಪಿಸ್ತೂಲ್‌ನಿಂದ 17 ವರ್ಷದ ವಿದ್ಯಾರ್ಥಿಗೆ ಹಾರಿಸಿದ ಸಹಪಾಠಿ

**ಹರಿಯಾಣ:** ಗುರುಗ್ರಾಮ್‌ನ ಸೆಕ್ಟರ್-48ರಲ್ಲಿ ಇಂಗ್ಲಿಷ್ ಮಾಧ್ಯಮ ಶಾಲೆಯ 11ನೇ ತರಗತಿಯ ಮೂರು ಸಹಪಾಠಿಗಳ ನಡುವೆ ಹಳೇ ಜಗಳದಿಂದ ಉಂಟಾದ ದೊಡ್ಡ ಘಟನೆ. 17 ವರ್ಷದ ಒಬ್ಬ ವಿದ್ಯಾರ್ಥಿ ತಂದೆಯ ಅವೈಧ ಪಿಸ್ತೂಲ್ ಬಳಸಿ ಸಹಪಾಠಿಗೆ ಗುಂಡು ಹಾರಿಸಿದ್ದಾನೆ. ಗಾಯಾಳು ಬಾಲಕನ ಸ್ಥಿತಿ ಕ್ರಿಟಿಕಲ್ ಆಗಿದ್ದು, ಮೇದಾಂತ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಪೊಲೀಸರು ಇಬ್ಬರು ಜುವೆನೈಲ್ ಆರೋಪಿಗಳನ್ನು ಕೆಲವೇ ಗಂಟೆಗಳಲ್ಲಿ ಬಂಧಿಸಲಿದ್ದಾರೆ.

ನವೆಂಬರ್ 8ರ ರಾತ್ರಿ 9:30ರ ಸುಮಾರಿಗೆ ಸದರ್ ಪೊಲೀಸ್ ಠಾಣೆಯ ನಿಯಂತ್ರಣ ಕೊಠಡಿಗೆ ಕರೆ ಬಂದಿತು. ಸೆಕ್ಟರ್-48ರ ಒಂದು ಫ್ಲಾಟ್‌ನಲ್ಲಿ ಒಬ್ಬ ಹುಡುಗನಿಗೆ ಗುಂಡು ಹೊಡೆದಿರುವುದಾಗಿ ವರದಿ. ಪೊಲೀಸ್ ತಂಡ ಸ್ಥಳಕ್ಕೆ ಧಾವಿಸಿದಾಗ, ಗಾಯಾಳುವನ್ನು ಕುಟುಂಬವು ಈಗಾಗಲೇ ಮೇದಾಂತ ಆಸ್ಪತ್ರೆಗೆ ಕರೆತೆಗೊಂಡಿದ್ದು ತಿಳಿದುಬಂತು. ಗುಂಡು ಗಾಯಾಳುವಿನ ಕತ್ತಿನಲ್ಲಿ ಸಿಕ್ಕಿಹಾಕಿಕೊಂಡಿದ್ದು, ಅಪರಾಧ ಸ್ಥಳದಲ್ಲಿ ಎಫ್‌ಎಸ್‌ಎಲ್ (ಫಾರೆನ್ಸಿಕ್ ಸೈನ್ಸ್ ಲ್ಯಾಬ್) ಮತ್ತು ಫಿಂಗರ್‌ಪ್ರಿಂಟ್ ತಂಡಗಳನ್ನು ಕರೆಸಿ ತನಿಖೆ ಆರಂಭಿಸಲಾಯಿತು.

ತನಿಖೆಯಲ್ಲಿ, ಫ್ಲಾಟ್‌ನ ಪೆಟ್ಟಿಗೆಯಿಂದ ಒಂದು ಪಿಸ್ತೂಲ್, ಒಂದು ಮ್ಯಾಗಜೀನ್, ಐದು ಲೈವ್ ಕಾರ್ಟ್ರಿಡ್ಜ್‌ಗಳು, ಒಂದು ಬಳಸಿದ ಕಾರ್ಟ್ರಿಡ್ಜ್ ಕೇಸ್ ಮತ್ತು 65 ಲೈವ್ ಸುತ್ತುಗಳು ಹೊಂದಿರುವ ಹೆಚ್ಚುವರಿ ಮ್ಯಾಗಜೀ ವಶಪಡಿಸಿಕೊಳ್ಳಲಾಯಿತು.


ಪಿಸ್ತೂಲ್ ಆರೋಪಿಯ ತಂದೆಯದು, ಪಟ್ಲಿ ಗ್ರಾಮದ ನಿವಾಸಿ, ರಿಯಲ್ ಎಸ್ಟೇಟ್ ಉದ್ಯಮಿಯೊಬ್ಬನು. ಅವರು ಮನೆಯಲ್ಲಿ ಲೈಸೆನ್ಸ್ ಇಲ್ಲದೆಗಿ ಇಟ್ಟುಕೊಂಡಿದ್ದ ಪಿಸ್ತೂಲ್ ಅನ್ನು ಮಗ ರಹಸ್ಯವಾಗಿ ತೆಗೆದುಕೊಂಡು ಅಪರಾಧ ಮಾಡಿದ್ದಾನೆ ಎಂದು ಒಪ್ಪಿಕೊಂಡಿದ್ದಾನೆ.

ನವೆಂಬರ್ 8 ರಂದು ಆಕೆಯ ಮಗನಿಗೆ (11ನೇ ತರಗತಿ ವಿದ್ಯಾರ್ಥಿ) ಸಹಪಾಠಿ ಒಬ್ಬ ಕರೆ ಮಾಡಿ ಭೇಟಿಗೆ ಒತ್ತಾಯಿಸಿದ್ದ. ನಿರಾಕರಿಸಿದಾಗ, ನಾನೇ ಬಂದು ಕರೆದುಕೊಂಡು ಹೋಗುತ್ತೇನೆ ಎಂದು ಹೇಳಿ, ಖೇರ್ಕಿ ದೌಲಾ ಟೋಲ್ ಪ್ಲಾಜಾ ಬಳಿ ಭೇಟಿಯಾಗಲು ಕರೆದೊಯ್ದ. ಆರೋಪಿಯು ಗಾಯಾಳುವನ್ನು ಮತ್ತೊಬ್ಬ ಸ್ನೇಹಿತನೊಂದಿಗೆ ಸೆಕ್ಟರ್-48ರ ಬಾಡಿಗೆ ಫ್ಲಾಟ್‌ಗೆ ಕರೆತೆಗೊಂಡು, ಹಳೇ ಜಗಳದ ಕಾರಣದಿಂದ ಕೊಲ್ಲುವ ಉದ್ದೇಶದಿಂದ ಗುಂಡು ಹಾರಿಸಿದ್ದಾನೆ ಎಂದು ಗಾಯಾಳುವಿನ ತಾಯಿ ಆರೋಪ ಮಾಡಿದ್ದಾರೆ.

ಎರಡು ತಿಂಗಳ ಹಿಂದೆ ಮೂವರು ಹುಡುಗರು ಜಗಳ ಮಾಡಿದ್ದರು, ಇದರಿಂದ ಆರೋಪಿ ಹಿಂಸಾತ್ಮಕ ಮನಸ್ಸು ಹೊಂದಿದ್ದ. ರಾತ್ರಿ ಭೋಜನ ಮತ್ತು ಪಾನೀಯ ಮಾಡಿ, ಇನ್ನೊಬ್ಬ ಸ್ನೇಹಿತನನ್ನು ಕರೆದುಕೊಂಡು ಫ್ಲಾಟ್‌ಗೆ ಹೋದ ನಂತರ, ಜಗಳ ಏರ್ಪಟ್ಟು ಹಲ್ಲೆ ನಡೆದಿದೆ. ಪ್ರಾಥಮಿಕ ವಿಚಾರಣೆಯಲ್ಲಿ, ಮೂವರೂ ಒಂದೇ ಶಾಲೆಯ 11ನೇ ತರಗತಿ ಸಹಪಾಠಿಗಳು ಎಂದು ತಿಳಿದುಬಂದಿದೆ.

ದೂರಿನ ಆಧಾರದ ಮೇಲೆ ಸದರ್ ಪೊಲೀಸ್ ಠಾಣೆಯಲ್ಲಿ FIR ದಾಖಲಿಸಿ ತನಿಖೆ ಆರಂಭ. ಕೆಲವೇ ಗಂಟೆಗಳಲ್ಲಿ ಇಬ್ಬರು ಜುವೆನೈಲ್ ಆರೋಪಿಗಳನ್ನುಬಂಧಿಸಲಾಗಿದೆ. ಜುವೆನೈಲ್ ಜಸ್ಟಿಸ್ ಬೋರ್ಡ್ಗೆ ವರದಿ ಸಲ್ಲಿಸಿ, ಹುಡುಗರ ರಕ್ಷಣೆಗೆ ಗಮನ ನೀಡಲಾಗಿದೆ. ಪೊಲೀಸ್ ಅಪರಾಧಕ್ಕೆ ಆಯುಧಗಳನ್ನು ಮಕ್ಕಳಿಂದ ದೂರವು ಇರಿಸಿ ಎಂದು ಹೊಂದಿರುವ ಕುಟುಂಬಗಳಿಗೆ ಎಚ್ಚರಿಕೆ ನೀಡಿದ್ದಾರೆ.

## ಫ್ಯಾನ್‌ಗೆ ನೇಣು ಬಿಗಿದುಕೊಂಡು ಬಾಲಕಿ ಆತ್ಮಹತ್ಯೆ



**ಬೆಂಗಳೂರು:** ನಗರದ ಹೃದಯಭಾಗವಾದ ಕಲಾಸಿಪಾಳ್ಯದಲ್ಲಿ ನಡೆದ ದುರ್ಘಟನೆ ಸ್ಥಳೀಯರನ್ನು ಬೆಚ್ಚಿಬೀಳಿಸಿದೆ. ಕೇವಲ 16 ವರ್ಷದ ಬಾಲಕಿ ಶರ್ಮಿಳಾ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಹೊರಬಿದ್ದಿದೆ. ಶರ್ಮಿಳಾ ತಂದೆ ತಾಯಿಯೊಂದಿಗೆ ಕಲಾಸಿಪಾಳ್ಯದಲ್ಲೇ ವಾಸವಿದ್ದು, ಪೋಷಕರು ತಮಿಳುನಾಡಿನ ದೇವಸ್ಥಾನವೊಂದಕ್ಕೆ ಪೂಜಾ ಕಾರ್ಯಕ್ಕಾಗಿ ತೆರಳಿದ್ದ ವೇಳೆ ಮನೆಯಲ್ಲಿ ಒಬ್ಬಳೇ ಇದ್ದಾಗ ಈ ಆಘಾತಕಾರಿ ಘಟನೆ ನಡೆದಿದೆ.

ಮನೆಗೆ ಹಿಂದಿರುಗಿದ ಪೋಷಕರು ಮಗಳ ಶವವನ್ನು ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿದ ಸ್ಥಿತಿಯಲ್ಲಿ ಕಂಡು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಘಟನಾ ಸ್ಥಳಕ್ಕೆ ಕಲಾಸಿಪಾಳ್ಯ ಠಾಣೆಯ ಪೊಲೀಸರು ಧಾವಿಸಿ, ಮಹಜರು ನಡೆಸಿ ಶವವನ್ನು ವಿಕ್ಟೋರಿಯಾ ಆಸ್ಪತ್ರೆಯ ಶವಾಗಾರಕ್ಕೆ ರವಾನೆ ಮಾಡಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ, ಶರ್ಮಿಳಾ ಯಾವುದೇ ಆತ್ಮಹತ್ಯೆ ಚೀಟಿ ಬರೆದಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತಳು ಹತ್ತನೇ ತರಗತಿ ವಿದ್ಯಾರ್ಥಿನಿಯಾಗಿದ್ದು, ಇತ್ತೀಚೆಗೆ ಶಾಲಾ ಪರೀಕ್ಷೆಗಳ ಒತ್ತಡದಲ್ಲಿದ್ದಾಳೆ ಎಂಬ ಮಾಹಿತಿಯೂ ಪೊಲೀಸರು ಸಂಗ್ರಹಿಸಿದ್ದಾರೆ. ಆದರೆ ಆತ್ಮಹತ್ಯೆಗೆ ನಿಖರವಾದ ಕಾರಣ ಇನ್ನೂ ತಿಳಿದುಬಂದಿಲ್ಲ. ಕುಟುಂಬದವರು ಆಕೆಯನ್ನು ಉಲ್ಲಾಸಭರಿತ ಮತ್ತು ಮಾತನಾಡುವ ಸ್ವಭಾವದವಳಾಗಿದ್ದಾಳೆ ಎಂದು ಹೇಳಿದ್ದು, ಈ ಘಟನೆ ಅವರಿಗೆ ನಂಬಲಸಾಧ್ಯವಾಗಿದೆ.

## ಖೈದಿಗಳಿಗೆ 'ರಾಜಾತಿಥ್ಯ ಪ್ರಕರಣ: ಮೂರು ಅಧಿಕಾರಿಗಳು ಸಸ್ಪೆಂಡ್



**ಬೆಂಗಳೂರು:** ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹ ದಲ್ಲಿ ಖೈದಿಗಳಿಗೆ 'ರಾಜಾತಿಥ್ಯ' ನೀಡುವ ಅಕ್ರಮಗಳು ಬಯಲಾದ ನಂತರ, ಕರ್ನಾಟಕ ಸರ್ಕಾರವು ಕಠಿಣ ಕ್ರಮ ಕೈಗೊಂಡಿದೆ. ಜೈಲು ಸೂಪರಿಂಟೆಂಡೆಂಟ್ ಮ್ಯಾಗೇರಿ, ಅಸಿಸ್ಟೆಂಟ್ ಸೂಪರಿಂಟೆಂಡೆಂಟ್ ಅಶೋಕ್ ಭಜಂತ್ರಿ ಸೇರಿದಂತೆ ಮೂರು ಹಿರಿಯ ಅಧಿಕಾರಿಗಳನ್ನು ಸಸ್ಪೆಂಡ್ ಮಾಡಲಾಗಿದೆ. ಚೀಫ್ ಸೂಪರಿಂಟೆಂಡೆಂಟ್ ಸುರೇಶ್ ಅವರನ್ನು ತಕ್ಷಣ ವರ್ಗಾವಣೆಗೆ ಶಿಫಾರಸು ಮಾಡಲಾಗಿದ್ದು, ಮೊದಲ ಬಾರಿಗೆ ಐಪಿಎಸ್ ಅಧಿಕಾರಿಯೊಬ್ಬರಿಗೆ ಜೈಲಿನ ಜವಾಬ್ದಾರಿ ಹಣಿಸಲಾಗುತ್ತಿದೆ. ಈ ಕ್ರಮಗಳು ಗ್ಯಾರಂಟಿ ನ್ಯೂಸ್‌ನ ವರದಿಗಳ ಬಿಗ್ ಇಂಪ್ಯಾಕ್ಟ್ ಅನ್ನು ತೋರುತ್ತವೆ.

ಅಕ್ಟೋಬರ್ 4 ರಂದು, ಖ್ಯಾತ ಅಪರಾಧಿ 'ಗುಬ್ಬಚ್ಚಿ ಸೀನನ ಬರ್ತ್‌ಡೇ ಪಾರ್ಟಿ ಬಗ್ಗೆ ಮೊದಲ ಸುದ್ದಿ ಬ್ರೇಕ್ ಮಾಡಿತು. ಜೈಲಿನೊಳಗೆ ಕೇಕ್, ಡ್ಯಾನ್ಸ್ ಮತ್ತು ಐಷಾರಾಮಿ ಆಚರಣೆಯ ವಿಡಿಯೋಗಳನ್ನು ಬಿತ್ತರಿಸಿ, ಅಧಿಕಾರಿಗಳ ಕರ್ತವ್ಯಲೋಪವನ್ನು ಎತ್ತಿ ತೋರಿಸಿತು. ಅಕ್ಟೋಬರ್ 24 ರಂದು, ಕೈದಿ ಸಾದಿಕ್



ಅವರ ಪತ್ನಿಯೊಂದಿಗಿನ ಸೆಲ್ಫಿ ವಿಡಿಯೋ ಬಯಲುಪಡಿಸಿ, ಮೊಬೈಲ್ ಫೋನ್ ಬಳಕೆಯ ಅಕ್ರಮವನ್ನು ತೆರೆದಿಟ್ಟಿತು. ನವೆಂಬರ್ 8 ರಂದು, 'ರೇಪಿಸ್ಟ್ ಹೈ ಫೈ ವ್ಯವಸ್ಥೆ' ಎಂದು ಕರೆದು, ವಿಕೃತಕಾಮಿ ಉಮೇಶ್ ರೆಡ್ಡಿಗೆ ನೀಡಲಾದ ಮೊಬೈಲ್ ಮತ್ತು ಟಿವಿ ಸೌಲಭ್ಯಗಳ ಬಗ್ಗೆ ವರದಿ ಮಾಡಿತು.

ಜೈಲಲ್ಲಿ ರಾಜಾತಿಥ್ಯಕ್ಕೆ ಅಧಿಕಾರಿಗಳ ತಲೆದಂಇದರ ಜೊತೆಗೆ, ರನ್ಯಾ ರಾವ್ ಲವರ್ ತರೂನ್ ರಾಜುಗೆ ನೀಡಿದ ರಾಜಾತಿಥ್ಯ, ಐಸಿಸ್ ಉಗ್ರ ಜುನೈದ್ ಹಮೀದ್ ಶಕೀಲ್ ಮನ್ನಾ ಮೊಬೈಲ್ ಬಳಸಿ ಭಯೋತ್ಪಾದಕ ಚಟುವಟಿಕೆಗಳನ್ನು ಮಾಡುತ್ತಿದ್ದ ವಿಷಯವನ್ನೂ ಗ್ಯಾರಂಟಿ ನ್ಯೂಸ್ ಬಯಲುಪಡಿಸಿತು. ಜೈಲಿನೊಳಗೆ ಎಣ್ಣೆ ಪಾರ್ಟಿ, ಡ್ಯಾನ್ಸ್ ಪ್ರೊಗ್ರಾಂಗಳು, ಐಟಂ ಸಾಂಗ್‌ಗಳು ಎಲ್ಲವನ್ನೂ ವಿಡಿಯೋಗಳೊಂದಿಗೆ ಬಿತ್ತರಿಸಿ, ಜೈಲು ಪ್ರತಿ ಕರ್ಮಕಾಂಡದಲ್ಲಿ ಅಕ್ರಮಗಳಿವೆ ಎಂದು ಆರೋಪಿಸಿತು. ಈ ವರದಿಗಳು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿ, ಜನರಲ್ಲಿ ಆಕ್ರೋಶ ಮೂಡಿಸಿದವು. ಜೈಲುಗಳು ಭಯೋತ್ಪಾದಕರ ರೆಕ್ರಿಯೇಷನ್ ಕ್ಲಬ್ ಆಗಿವೆ ಎಂದು ಬಿಜೆಪಿ ನಾಯಕರು ಸರ್ಕಾರವನ್ನು ಟೀಕಿಸಿದರು.

ಈ ವರದಿಗಳ ನಂತರ ಗೃಹಸಚಿವ ಡಾ. ಜಿ. ಪರಮೇಶ್ವರ್ ಅವರು ತೀವ್ರ ಗರಂ ಆಗಿ, ಹಿರಿಯ ಅಧಿಕಾರಿಗಳ ಸಭೆ ಕರೆದರು. ಇದು ಕಾನೂನು ಸುವ್ಯವಸ್ಥೆಗೆ ಧಕ್ಕೆ. ಅಧಿಕಾರಿಗಳು ಕರ್ತವ್ಯಲೋಪ ತೋರಿದ್ದಾರೆ ಎಂದು ಅವರು ತೀವ್ರ ತರಾಟೆಗೆ ಒಳಪಡಿಸಿದರು. ಸಭೆಯಲ್ಲಿ ವಿಡಿಯೋಗಳ ತನಿಖೆಗೆ ಸಮಿತಿ ರಚಿಸಲು ಸೂಚನೆ ನೀಡಿದರು. ಕಾನೂನು ಸುವ್ಯವಸ್ಥೆ ಎಡಿಜಿಪಿ ಜಿತೇಂದ್ರ, ಅವರ ನೇತೃತ್ವದಲ್ಲಿ ತನಿಖಾ ತಂಡ ರಚಿಸಿ, ಶೀಘ್ರ ವರದಿ ನೀಡುವಂತೆ ಆದೇಶಿಸಿದರು. ಇಂತಹ ಘಟನೆಗಳು ಮೊದಲು ಸಂಭವಿಸಿವೆ. ಆದರೆ ಈ ಬಾರಿ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಪರಮೇಶ್ವರ್ ಹೇಳಿದರು.

ಎದ್ದು ನಿಂತು ಗೃಹ ಸಚಿವರ ಪ್ರಶ್ನೆಗೆ ಜೈಲಾಧಿಕಾರಿಗಳ ಉತ್ತರ ಪರಪ್ಪನ ಅಗ್ರಹಾರ ಜೈಲು, ಕರ್ನಾಟಕದ ಅತಿದೊಡ್ಡ ಮತ್ತು ಹೈಸೆಕ್ಯೂರಿಟಿ ಜೈಲು. ಇಲ್ಲಿ ರಾಜಕೀಯರು, ನಟರು, ಭಯೋತ್ಪಾದಕರು ಸೇರಿದಂತೆ ಹಲವು ಖ್ಯಾತ ಅಪರಾಧಿಗಳು ತಂಗಿಹಾಗಿದ್ದಾರೆ. ವಿಡಿಯೋಗಳಲ್ಲಿ ಕೈದಿಗಳು ಮೊಬೈಲ್ ಬಳಸಿ ಕರೆ ಮಾಡುತ್ತಿರುವುದು, ಟಿವಿ ನೋಡುತ್ತಿರುವುದು, ದಾರು ಪಾರ್ಟಿಗಳು ನಡೆಯುತ್ತಿರುವುದು ಸ್ಪಷ್ಟವಾಗಿ ಕಂಡುಬಂದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದು ಜೈಲು ನಿರ್ವಹಣೆಯಲ್ಲಿ ಗಂಭೀರ ವೈಫಲ್ಯ ಎಂದು ಕೆರಳಿ, ತಕ್ಷಣ ಕ್ರಮಕ್ಕೆ ಸೂಚನೆ ನೀಡಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಮಗನ ಜೀವ ಉಳಿಸಲು ಹೋಗಿ ಬಲಿಯಾದ ತಾಯಿ





**ಶಿವಮೊಗ್ಗ:** ಮಗನ ಮೇಲಿನ ದಾಳಿಯನ್ನು ತಡೆಯಲು ಹೋಗಿ ಮಹಿಳೆಯೋರ್ವರು ಬರ್ಬರವಾಗಿ ಕೊಲೆಯಾಗಿರುವ ಘಟನೆ ಶಿವಮೊಗ್ಗ ತಾಲೂಕು ದುಮ್ಮಳ್ಳಿ ಗ್ರಾಮದ ಸಿದ್ದೇಶ್ವರ ಬಡಾವಣೆಯಲ್ಲಿ ನಡೆದಿದೆ. ಗಂಗಮ್ಮ (45) ಮೃತ ದುರ್ದೈವಿಯಾಗಿದ್ದು, ಆರೋಪಿಗಳಾದ ಹರೀಶ್ ಮತ್ತು ನಾಗೇಶ್‌ರನ್ನು ಪೊಲೀಸರು ಬಂಧಿಸಿದ್ದಾರೆ. ಆರೋಪಿಗಳು ಮಚ್ಚಿನಿಂದ ದಾಳಿ ಮಾಡಿರುವ ಪರಿಣಾಮ ಗಂಭೀರವಾಗಿ ಗಾಯಗೊಂಡಿದ್ದ ಗಂಗಮ್ಮ ತೀವ್ರ ರಕ್ತಸ್ರಾವದಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಸಿದ್ದೇಶ್ವರ ಬಡಾವಣೆಯಲ್ಲಿ ನಿನ್ನೆ ರಾತ್ರಿ 11 ಗಂಟೆ ಸುಮಾರಿಗೆ ಆರೋಪಿಗಳಾದ ಹರೀಶ್ ಮತ್ತು ನಾಗೇಶ್ ಬೈಕ್‌ನಲ್ಲಿ ತೆರಳುತ್ತಿದ್ದ ಅದೇ ಬಡಾವಣೆಯ ಮಂಜುನಾಥ್ ಎಂಬವರ ಮೇಲೆ ಕಲ್ಲಿನಿಂದ ಹಲ್ಲೆ ನಡೆಸಿದ್ದರು. ಮಾನವೀಯತೆಯಿಂದ ಗಾಯಗೊಂಡ ಮಂಜುನಾಥನಿಗೆ ಗಂಗಮ್ಮ ಉಪಚರಿಸಿದ್ದರು. ಮಂಜುನಾಥ್ ತಲೆಗೆ ಅರಿಶಿಣ ಹಚ್ಚಿ, ನೀರು ಕುಡಿಸಿದ್ದರು. ಇದೇ ವಿಚಾರಕ್ಕೆ ಕುಪಿತಗೊಂಡ ಆರೋಪಿಗಳು ಗಂಗಮ್ಮ ಅವರ ಪುತ್ರ ಜೀವನ್ ಬಳಿ ಗಲಾಟೆ ಮಾಡಿದ್ದಾರೆ. ನಾವು ಹೊಡೆದವರಿಗೆ ಅರಿಶಿಣ ಹಚ್ಚುತ್ತೀರಾ ಎಂದು ತಗಾದೆ ತೆಗೆದು ಹಲ್ಲೆ ನಡೆಸಿದ್ದಾರೆ. ಬಳಿಕ ಮನೆಯಿಂದ ಮಚ್ಚು ತಂದು ಜೀವನ್ ಮೇಲೆ ಬೀಸಿದ್ದು, ಈ ವೇಳೆ ಅಲ್ಲೇ ಇದ್ದ ಗಂಗಮ್ಮ ತಲೆ ಮತ್ತು ಕುತ್ತಿಗೆ ಭಾಗಮನ್ನು ಮಚ್ಚು ಸಿಳಿದೆ. ಗಾಯಗೊಂಡ ಅವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಘಟನಾ ಸ್ಥಳಕ್ಕೆ ತುಂಗಾ ನಗರ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಕೊಲೆ ಮಾಡಿ ತಪ್ಪಿಸಿಕೊಂಡಿದ್ದ ಆರೋಪಿಗಳನ್ನು ಬಂಧಿಸಲಾಗಿದ್ದು, ಹಳೆಯ ದ್ವೇಷದ ಹಿನ್ನಲೆ ಕೊಲೆ ಮಾಡಿರುವ ವಿಚಾರ ಬೆಳಕಿಗೆ ಬಂದಿದೆ.

**ಹಳೆಯ ದ್ವೇಷಕ್ಕೆ ಹರಿದ ನೆತ್ತರು**

ಮೃತ ಗಂಗಮ್ಮ ಅವರ ಮಗ ಜೀವನ್ ಮೇಲೆ ಆರೋಪಿಗಳಿಗೆ ಹಳೆಯ ದ್ವೇಷ ಇತ್ತು ಎನ್ನಲಾಗಿದೆ. ಈ ಹಿಂದೆ ಇದೇ ದುಮ್ಮಳ್ಳಿ ಗ್ರಾಮದಲ್ಲಿ ಜೀವನ್ ಸಂಬಂಧಿಕರ ಮನೆ ಬಾಡಿಗೆ ಪಡೆದು ನಾಗೇಶ್ ಮತ್ತು ಹರೀಶ್ ನೆಲೆಸಿದ್ದರು. ಆದರೆ ಬಾಡಿಗೆ ಹಣ ನೀಡಿರಲಿಲ್ಲ. ಹೀಗಾಗಿ ಊರಿನ ಸರ್ಕಲ್‌ನಲ್ಲಿ ಹಣ ನೀಡುವಂತೆ ಜೀವನ್ ಕೇಳಿದ್ದ. ಆ ವೇಳೆ ಇವರ ನಡುವೆ ಗಲಾಟೆ ನಡೆದಿತ್ತು. ಆ ಬಳಿಕ ಜೀವನ್ ಮನೆ ಮುಂಭಾಗವೇ ಇರುವ ಮನೆಯಲ್ಲಿ ಬಂದು ನೆಲೆಸಿದ್ದ ಆರೋಪಿಗಳು, ಜೀವನ್‌ಗೆ ಗುರಾಯಿಸಿಕೊಂಡೇ ಓಡಾಡುತ್ತಿದ್ದರು. ಇವರ ನಡುವೆ ಆಗಾಗ ಸಣ್ಣ ಪುಟ್ಟ ಗಲಾಟೆ ಸಹ ನಡೆಯುತ್ತಿತ್ತು ಎನ್ನಲಾಗಿದೆ.

# ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸಾಮೂಹಿಕವಾಗಿ ನಮಾಜ್



**ದೇವನಹಳ್ಳಿ:** ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್-2ರಲ್ಲಿ ಸಾಮೂಹಿಕ ನಮಾಜ್ ಮಾಡಿರುವ ಆರೋಪ ಕೇಳಿಬಂದಿದ್ದು, ವೈರಲ್ ಆಗಿರುವ ವಿಡಿಯೋ ಭಾರಿ ಚರ್ಚೆಗೆ ಗ್ರಾಸವಾಗಿದೆ. ಈ ಬೆನ್ನಲ್ಲೇ ಏರ್‌ಪೋರ್ಟ್ ಆಡಳಿತ ಮಂಡಳಿ ಅಲರ್ಟ್ ಆಗಿದ್ದು, ಏರ್‌ಪೋರ್ಟ್ ಅರೈವಲ್ ಗೇಟ್ ಬಳಿ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ. ಪ್ರಯಾಣಿಕರು ಎಲ್ಲೂ ಪ್ರಾರ್ಥನೆ ಮಾಡಲು ಅವಕಾಶ ನೀಡದಂತೆ ನೋಡಿಕೊಳ್ಳಲು ಖಾಸಗಿ ಭದ್ರತಾ ಸಿಬ್ಬಂದಿಯನ್ನ ಏರ್‌ಪೋರ್ಟ್ ಆಡಳಿತ ಮಂಡಳಿ ನಿಯೋಜಿಸಿದೆ.


ಹಜ್ ಯಾತ್ರಿಕರನ್ನು ಬೀಳ್ಕೊಡಲು ಬಂದಿದ್ದ ಕೆಲವರು ವಿಮಾನ ನಿಲ್ದಾಣದ ಟರ್ಮಿನಲ್ ಒಳಭಾಗದಲ್ಲೇ ಸಾಮೂಹಿಕವಾಗಿ ಪ್ರಾರ್ಥನೆ ಸಲ್ಲಿಸಿದ್ದಾರೆ ಎನ್ನಲಾಗಿದ್ದು, ಸಾಮೂಹಿಕ ನಮಾಜ್ ನಡೆಯುತ್ತಿದ್ದರೂ ಸಿಬ್ಬಂದಿ ನೋಡುತ್ತಾ ಮೌನವಾಗಿರುವ ವಿಡಿಯೋ ವೈರಲ್ ಆಗಿತ್ತು. ಹೀಗಾಗಿ ಮತ್ತೆ ಇಂತಹ ಘಟನೆ ನಡೆಯದಂತೆ ಎಚ್ಚರ ವಹಿಸಿರುವ ಏರ್‌ಪೋರ್ಟ್ ಆಡಳಿತ ಮಂಡಳಿ, ಅಗತ್ಯ ಕ್ರಮಕ್ಕೆ ಮುಂದಾಗಿದೆ.

**ಶಾಸಕ ಯತ್ನಾಳ್ ಪೋಸ್ಟ್.**

ಏರ್‌ಪೋರ್ಟ್‌ನಲ್ಲಿ ನಮಾಜ್ ಮಾಡಿರುವ ವಿಡಿಯೋ ವೈರಲ್ ವಿಚಾರವಾಗಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕಿಡಿ ಕಾರಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಅವರು, ಸಾರ್ವಜನಿಕ ಸ್ಥಳಗಳಲ್ಲಿ ನಮಾಜ್ ಮಾಡಲು ಇವರಿಗೆ ಅನುಮತಿ ಕೊಟ್ಟಿದ್ದು ಯಾರು? ಮುಸಲ್ಮಾನ ಬಾಹುಳ್ಯ ದೇಶಗಳಲ್ಲೇ ಸಾರ್ವಜನಿಕ ಸ್ಥಳಗಳಲ್ಲಿ ನಮಾಜ್ ನಿಷೇಧಿಸಿರುವಾಗ ನಮ್ಮ ದೇಶದಲ್ಲಿ ಏಕೆ ಅನುಮತಿ ಕೊಡಬೇಕು? ಎಂದು ಪ್ರಶ್ನಿಸಿದ್ದಾರೆ.

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪಥಸಂಚಲನಕ್ಕೆ ತಹಶೀಲ್ದಾರಿಂದ ಹಿಡಿದು ಡಿಸಿ,ಎಸ್ಪಿವರೆಗೂ ಅನುಮತಿ ಪಡೆಯಬೇಕೆಂದು ಆದೇಶ ಹೊರಡಿಸುವ ರಾಜ್ಯ ಸರ್ಕಾರಕ್ಕೆ ಸಾರ್ವಜನಿಕ ಸ್ಥಳಗಳಲ್ಲಿ ನಮಾಜ್ ಮಾಡಬಾರದು ಎಂದು ಹೇಳುವುದಕ್ಕೆ ಧೈರ್ಯವಿಲ್ಲವೇ? ಸಾರ್ವಜನಿಕರ ಸುಗಮ ಸಂಚಾರಕ್ಕೆ ಅಡ್ಡಿ ಪಡಿಸಿದ ಹಿನ್ನೆಲೆಯಲ್ಲಿ ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ನಮಾಜ್ ಮಾಡಿದವರ ವಿರುದ್ಧ ಸರ್ಕಾರ ತಕ್ಷಣವೇ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

# ತಿರುಪತಿ ದೇವಸ್ಥಾನಕ್ಕೆ ನಕಲಿ ತುಪ್ಪ ಪೂರೈಸಿದ ಡೈರಿ: ಸಿಬಿಐ ಸ್ಪಷ್ಟನೆ



**ತಿರುಪತಿ:** ತಿರುಪತಿ ಲಡ್ಡು ಪ್ರಸಾದದಲ್ಲಿ ತುಪ್ಪದ ಕಲಬೆರಕೆ ಪ್ರಕರಣ ದಲ್ಲಿ ಸಿಬಿಐ ತನಿಖೆಯು ಆಘಾತಕಾರಿ ಸತ್ಯಗಳನ್ನು ಬಯಲು ಮಾಡಿದೆ. ಉತ್ತರಾಖಂಡ ಮೂಲದ 'ಭೋಲೆ ಬಾಬಾ ಆರ್ಗಾನಿಕ್ ಡೈರಿ' ಎಂಬ ಸಂಸ್ಥೆಯು ಕಳೆದ ಐದು ವರ್ಷಗಳಿಂದ (2019-2024) ತಿರುಮಲ ತಿರುಪತಿ ದೇವಸ್ಥಾನಕ್ಕೆ (ಟಿಟಿಡಿ) ಒಂದು ಹನಿ ಹಾಲು ಅಥವಾ ಬೆಣ್ಣೆ ಖರೀದಿಸದೆಯೇ 68 ಲಕ್ಷ ಕಿಲೋಗ್ರಾಂ ತುಪ್ಪವನ್ನು ಪೂರೈಸಿ 250 ಕೋಟಿ ರೂಪಾಯಿ ಗಳಿಸಿದೆ ಎಂಬ ಆರೋಪ ಬಯಲಾಗಿದೆ. ಈ ಡೈರಿಯು ನಕಲಿ ದೇಸಿ ತುಪ್ಪ ತಯಾರಿಸಿ, ರಾಸಾಯನಿಕಗಳನ್ನು ಬಳಸಿ ಗುಣಮಟ್ಟವನ್ನು ಮೋಸದಿಂದ ತೋರಿಸುತ್ತಿತ್ತು ಎಂದು ಸಿಬಿಐ ವಿಶೇಷ ತನಿಖಾ ತಂಡ (ಎಸ್‌ಐಟಿ) ಬಹಿರಂಗಪಡಿಸಿದೆ.

ಟಿಟಿಡಿ ದೇವಸ್ಥಾನವು ವಿಶ್ವಪ್ರಸಿದ್ಧ ತಿರುಪತಿ ಲಡ್ಡು ತಯಾರಿಕೆಗೆ ಬಳಸುವ ತುಪ್ಪಕ್ಕಾಗಿ ಭೋಲೆ ಬಾಬಾ ಡೈರಿಗೆ ಒಪ್ಪಂದ ನೀಡಿತ್ತು. ಆದರೆ ಈ ಡೈರಿಯು ಉತ್ತರಾಖಂಡದ ಭಗವಾನ್‌ಪುರದಲ್ಲಿ ಪೋಮಿಲ್ ಜೈನ್ ಮತ್ತು ವಿಪಿನ್ ಜೈನ್ ಅವರ ನೇತೃತ್ವದಲ್ಲಿ ನಡೆಯುತ್ತಿತ್ತು. ಸಿಬಿಐ ಪ್ರಕಾರ, ಅವರು ನಕಲಿ ಉತ್ಪಾದನಾ ಘಟಕ ಸ್ಥಾಪಿಸಿ, ಹಾಲು ಸಂಗ್ರಹಣೆ, ಪಾವತಿ ದಾಖಲೆಗಳನ್ನು ಸಂಪೂರ್ಣ ಸುಳ್ಳು ಮಾಡಿದ್ದಾರೆ. ಡೈರಿಯು ಮೊನೊಡಿಗ್ಲಿಸರೈಡ್‌ಗಳು, ಅಸಿಟಿಕ್ ಆಸಿಡ್ ಎಸ್ಟರ್‌ಗಳಂತಹ ರಾಸಾಯನಿಕಗಳನ್ನು ಬಳಸಿ ತುಪ್ಪವನ್ನು 'ಆರ್ಗಾನಿಕ್' ಎಂದು ತೋರಿಸುತ್ತಿತ್ತು. ಈ ರಾಸಾಯನಿಕಗಳನ್ನು ಪೂರೈಸಿದ್ದು ಆರೋಪಿ ಅಜಯ್ ಕುಮಾರ್ ಸುಗಂಧ್. ಅವರ ಬಂಧನದ ನಂತರ ಎಸ್‌ಐಟಿ ಈ ವಿವರಗಳನ್ನು ಸಂಗ್ರಹಿಸಿದೆ.

2022ರಲ್ಲಿ ಭೋಲೆ ಬಾಬಾ ಡೈರಿಯನ್ನು ಅನರ್ಹಗೊಳಿಸಿ ಕಪ್ಪುಪಟ್ಟಿಗೆ ಸೇರಿಸಲಾಯಿತು. ಆದರೂ ಅವರು ಮೋಸದ ತಂತ್ರಗಳನ್ನು ಬಳಸಿ ಪೂರೈಕೆಯನ್ನು ಮುಂದುವರಿಸಿದರು. ತಿರುಪತಿ ಮೂಲದ 'ವೈಷ್ಣವಿ ಡೈರಿ', ಉತ್ತರ ಪ್ರದೇಶದ 'ಮಾಲ್ ಗಂಗಾ' ಮತ್ತು ತಮಿಳುನಾಡಿನ 'ಎಆರ್ ಡೈರಿ ಫುಡ್ಸ್'ಗಳ ಮೂಲಕ ಬಿಡ್ ಹಾಕಿ ಒಪ್ಪಂದ ಪಡೆದರು. ಸಿಬಿಐ ತನಿಖೆಯಲ್ಲಿ ಬಯಲಾದಂತೆ, ಕಳೆದ ವರ್ಷ ಜುಲೈನಲ್ಲಿ ಎಆರ್ ಡೈರಿಯು ವೈಷ್ಣವಿ ಡೈರಿ ಮೂಲಕ ಟಿಟಿಡಿಗೆ ಪ್ರಾಣಿಗಳ ಕೊಬ್ಬು ಹೊಂದಿರುವ ನಕಲಿ ತುಪ್ಪವನ್ನು ಪೂರೈಸಿ ಮರುಮಾರಾಟ ಮಾಡಿತ್ತು.

ತನಿಖಾ ತಂಡವು ದಿಂಡಿಗಲ್‌ನ ಎಆರ್ ಡೈರಿ ಸ್ಥಾವರವನ್ನು ಪರಿಶೀಲಿಸಿದಾಗ ಆಘಾತಕಾರಿ ಸತ್ಯ ಬಯಲಾಯಿತು. ನಾಲ್ಕು ತುಪ್ಪ ಟ್ಯಾಂಕರ್‌ಗಳು ಡೈರಿಗೆ ಹಿಂದಿರುಗದೆ, ವೈಷ್ಣವಿ ಡೈರಿ ಬಳಿಯ ಸ್ಥಳೀಯ ಕಲ್ಲು ಪುಡಿಮಾಡುವ ಘಟಕಕ್ಕೆ ಕಳುಹಿಸಲಾಗಿತ್ತು. ಎಫ್‌ಎಸ್‌ಎಸ್‌ಎಐ ಅಧಿಕಾರಿಗಳು ಮತ್ತು ಎಸ್‌ಐಟಿ ತಂಡ ಈ ಟ್ಯಾಂಕರ್‌ಗಳನ್ನು ವಶಪಡಿಸಿಕೊಂಡಿದೆ. ನೆಲ್ಲೂರು ನ್ಯಾಯಾಲಯಕ್ಕೆ ಸಲ್ಲಿಸಿದ ರಿಮಾಂಡ್ ವರದಿಯಲ್ಲಿ ಎಸ್‌ಐಟಿ ಈ ಎಲ್ಲ ವಿವರಗಳನ್ನು ದಾಖಲಿಸಿದೆ.

ಈ ಪ್ರಕರಣವು ಭಕ್ತರ ಭಾವನೆಗಳನ್ನು ನೋಯಿಸಿದೆ. ದಿನನಿತ್ಯ ಲಕ್ಷಾಂತರ ಭಕ್ತರು ಸೇವಿಸುವ ಲಡ್ಡು ಪ್ರಸಾದದಲ್ಲಿ ನಕಲಿ ತುಪ್ಪ ಬಳಕೆಯು ದೇವಸ್ಥಾನದ ಆಡಳಿತದ ಮೇಲೆ ಪ್ರಶ್ನೆಗಳನ್ನು ಎಬ್ಬಿಸಿದೆ. ಟಿಟಿಡಿ ಒಪ್ಪಂದ ನೀಡುವ ಪ್ರಕ್ರಿಯೆಯಲ್ಲಿ ದೌರ್ಬಲ್ಯಗಳಿವೆಯೇ ? ಗುಣಮಟ್ಟ ಪರೀಕ್ಷೆಯಲ್ಲಿ ವಿಫಲತೆ ಏಕೆ ? ಎಂಬ ಪ್ರಶ್ನೆಗಳು ಚರ್ಚೆಗೆ ಗ್ರಾಸವಾಗಿವೆ. ಸಿಬಿಐ ತನಿಖೆಯು ಇನ್ನಷ್ಟು ಆರೋಪಿಗಳನ್ನು ಬಂಧಿಸುವ ನಿರೀಕ್ಷೆಯಿದೆ. ಭೋಲೆ ಬಾಬಾ ಡೈರಿಯ ಪ್ರವರ್ತಕರು ಮತ್ತು ಸಂಬಂಧಿತ ಡೈರಿಗಳ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿದುಬಂದಿದೆ

# ಮತಗಳ್ಳತನದ ಬಗ್ಗೆ ಮೊದಲು ಪತ್ತೆ ಹಚ್ಚಿದ್ದೇ ಕರ್ನಾಟಕದಲ್ಲಿ: ಡಿಕೆಶಿ



**ನವದೆಹಲಿ:** ಚುನಾವಣೆಗಳಲ್ಲಿ ಮತಗಳ್ಳತನ (Vote Theft) ನಡೆಯುತ್ತಿರುವ ಬಗ್ಗೆ ಮೊದಲು ಪತ್ತೆ ಹಚ್ಚಿದ್ದೇ ಕರ್ನಾಟಕದಲ್ಲಿ. ಈಗ ಮಹಾರಾಷ್ಟ್ರ, ಹರಿಯಾಣ, ಬಿಹಾರದಲ್ಲಿ ನಡೆಸಿರುವ ಅಕ್ರಮಗಳು ಬೆಳಕಿಗೆ ಬಂದಿವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ (DK Shivakumar) ತಿಳಿಸಿದರು.

ದೆಹಲಿಯಲ್ಲಿ ಎಐಸಿಸಿ ನೂತನ ಕಟ್ಟಡ ಇಂದಿರಾ ಭವನದ ಆವರಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಮ್ಮ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಸಾಂಕೇತಿಕವಾಗಿ ಸಹಿ ಸಂಗ್ರಹ ಅಭಿಯಾನದ ದಾಖಲೆಗಳನ್ನು ಹಸ್ತಾಂತರಿಸಿದ್ದೇವೆ. 100 ವರ್ಷಗಳ ಹಿಂದೆ ಮಹಾತ್ಮ ಗಾಂಧೀಜಿ ಅವರು ನಿಭಾಯಿಸಿದ್ದ ಜವಾಬ್ದಾರಿಯನ್ನು ಈಗ ನಮ್ಮ ರಾಜ್ಯದ ಮಲ್ಲಿಕಾರ್ಜುನ ಖರ್ಗೆ ಅವರು ನಿಭಾಯಿಸುತ್ತಿದ್ದಾರೆ. ಅವರ ಮಾರ್ಗದರ್ಶನದಲ್ಲಿ ಮತದಾನದ ಹಕ್ಕು ರಕ್ಷಣೆ ಹೋರಾಟ ಮಾಡಿದ್ದೇವೆ. ಒಬ್ಬರಿಗೆ ಒಂದು ಮತ ಎಂದು ನಾವು ಹೋರಾಟ ಮಾಡುತ್ತಿದ್ದೇವೆ. ಮತಗಳ್ಳತನವನ್ನು ಮೊದಲು ಪತ್ತೆಹಚ್ಚಿದ್ದೇ ನಮ್ಮ ರಾಜ್ಯದಲ್ಲಿ. ಎಐಸಿಸಿ ಸಂಶೋಧನಾ ವಿಭಾಗ, ನಮ್ಮ ಅಭ್ಯರ್ಥಿಯಾಗಿದ್ದ ಮನ್ಸೂರ್ ಅಲಿ ಖಾನ್, ಕೆಪಿಸಿಸಿ ತಂಡ ಸೇರಿ ಈ ಮತಗಳ್ಳತನ ಪತ್ತೆ ಮಾಡಿ ಎಐಸಿಸಿಗೆ ಮಾಹಿತಿ ನೀಡಿದೆವು ಎಂದು ವಿವರಿಸಿದರು.

ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವರು ಬೆಂಗಳೂರಿಗೆ ಆಗಮಿಸಿ ಫ್ರೀಡಂ ಪಾರ್ಕ್‌ನಿಂದ ಈ ಹೋರಾಟ ಆರಂಭಿಸಲಾಯಿತು. ನಂತರ ಮಹಾರಾಷ್ಟ್ರ, ಹರಿಯಾಣ ಚುನಾವಣಾ ಅಕ್ರಮ ಬಯಲಾಗಿ ಈ ಹೋರಾಟ ಬಿಹಾರದವರೆಗೂ ಹಬ್ಬಿತು. ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೆವಾಲ ಅವರ ನಿರ್ದೇಶನದ ಮೇರೆಗೆ ಈ ಅಭಿಯಾನ ಪೂರ್ಣಗೊಳಿಸಿದ್ದೇವೆ ಎಂದರು. ಇದನ್ನೂ ಓದಿ: ಜೆಡಿಎಸ್ ಕೋರ್ ಕಮಿಟಿ ಸ್ಥಾನದಿಂದ ಜಿಟಿ ದೇವೇಗೌಡ ಔಟ್ - ಎಂ.ಕೃಷ್ಣಾರೆಡ್ಡಿಗೆ ಮಣೆ ಹಾಕಿದ ಜೆಡಿಎಸ್ ವರಿಷ್ಠರು

ನಮ್ಮ ಕಾರ್ಯಕರ್ತರು, ಬ್ಲಾಕ್, ಜಿಲ್ಲಾಧ್ಯಕ್ಷರು ಹಾಗೂ ಪಕ್ಷದ ವಿವಿಧ ಘಟಕಗಳ ಪರಿಶ್ರಮದಿಂದ ಸಂಗ್ರಹಿಸಲಾದ ಸಹಿಗಳನ್ನು ಸಲ್ಲಿಕೆ ಮಾಡಿದ್ದೇವೆ. ನಾವು ನಮ್ಮ ಕರ್ತವ್ಯ ಮಾಡಿದ್ದು, ಮೊನ್ನೆಯಷ್ಟೇ ನಾನು ಹಾಗೂ ಸಿಎಂ ಈ ವಿಚಾರವಾಗಿ ಮಾಧ್ಯಮಗೋಷ್ಠಿ ನಡೆಸಿದ್ದೇವೆ. ನಮ್ಮ ಕಾರ್ಯಕರ್ತರು ಈ ಅಭಿಯಾನವನ್ನು ಇನ್ನೂ ಮುಂದುವರಿಸುತ್ತಿದ್ದು, ನಂತರ ಸಂಗ್ರಹಿಸುವ ಸಹಿ ದಾಖಲೆಗಳನ್ನು ಮುಂದಿನ ದಿನಗಳಲ್ಲಿ ಸಲ್ಲಿಕೆ ಮಾಡುತ್ತೇವೆ ಎಂದು ತಿಳಿಸಿದರು.


ಮತಗಳ್ಳತನ ಖಂಡಿತವಾಗಿ ಆಗಿದೆ. ಬಿಹಾರದಲ್ಲಿ ಎಸ್‌ಐಆರ್ ನಡೆದಾಗ ನ್ಯಾಯಾಲಯ ಮಧ್ಯಪ್ರವೇಶ ಮಾಡಿ ಏಕೆ ಸೂಚನೆ ನೀಡಿತು? ರಾಹುಲ್ ಗಾಂಧಿ ಅವರು ಇದರ ಬಗ್ಗೆ ಮೊದಲ ಪತ್ರಿಕಾಗೋಷ್ಠಿ ನಡೆಸಿದ ನಂತರ ಮಾಧ್ಯಮಗಳು ಬೆಂಗಳೂರಿಗೆ ಬಂದು ಉಲ್ಲೇಖಿತ ಮನೆಗಳ ಸಂಖ್ಯೆ ಸೇರಿದಂತೆ ಯಾವ, ಯಾವ ಕಡೆ ಅಕ್ರಮ ನಡೆದಿದೆ ಎಂದು ಫ್ಯಾಕ್ಟ್ ಚೆಕ್ ಮಾಡಿದವು. ಯಾವ ಸರ್ಕಾರವೂ ಅದರ ವೈಫಲ್ಯ ಒಪ್ಪಿಕೊಳ್ಳುವುದಿಲ್ಲ. ವಿರೋಧ ಪಕ್ಷದ ಕೆಲಸವೇ ವೈಫಲ್ಯಗಳನ್ನು ಕಂಡುಹಿಡಿದು ತಿಳಿಸುವುದು ಎಂದರು.

ಕುಮಾರಸ್ವಾಮಿ ಅವರೂ ಭಯೋತ್ಪಾದಕರ ಒಂದು ಭಾಗವೇ? ವಿಧಾನಸೌಧದಲ್ಲಿ ಭಯೋತ್ಪಾದಕರಿದ್ದಾರೆ ಎನ್ನುವ ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಕುಮಾರಸ್ವಾಮಿ ಅವರೂ ಸಹ ಭಯೋತ್ಪಾದಕರ ಭಾಗವಾಗಿದ್ದಾರೆಯೇ? ಅವರೂ ಸಹ ವಿಧಾನಸೌಧದಲ್ಲಿ ಕುಳಿತಿರಲಿಲ್ಲವೇ? ಅವರಿಗೂ ಹಾಗೂ ಅವರ ಪಕ್ಷದವರಿಗೂ, ಅವರ ಆಡಳಿತಕ್ಕೂ ಇದು ಅನ್ವಯಿಸುತ್ತದೆ ಎಂದು ತಿರುಗೇಟು ನೀಡಿದರು. ಇದನ್ನೂ ಸಂವಿಧಾನಿಕ ಸಂಸ್ಥೆಗಳ ದುರುಪಯೋಗ:

ಚುನಾವಣಾ ಆಯೋಗವು ಬಿಹಾರದ ಮತದಾರರಿಗೆ ಸರಿಯಾದ ನ್ಯಾಯ ಒದಗಿಸಿಲ್ಲ. ಬಿಜೆಪಿ ಸಂವಿಧಾನಿಕ ಸಂಸ್ಥೆಗಳನ್ನು ದುರುಪಯೋಗ ಮಾಡಿಕೊಂಡಿದೆ. ಯಾವುದು ಕಾಡದಿದ್ದರೂ ಆತ್ಮಸಾಕ್ಷಿ ಎನ್ನುವುದು ಇದ್ದೇ ಇರುತ್ತದೆ. ಅದು ಅಂತಿಮವಾಗಿ ಕೆಲಸ ಮಾಡಲಿದೆ ಎಂದು ಹೇಳಿದರು. ಮುಖ್ಯಮಂತ್ರಿ ಹುದ್ದೆ ಬದಲಾವಣೆ ಬಗೆಗಿನ ಊಹಾಪೋಹಗಳ ಬಗ್ಗೆ ಕೇಳಿದಾಗ, ನಾನು ರಾಜಕೀಯ ವಿಚಾರಗಳನ್ನು ಮಾತನಾಡುವುದಿಲ್ಲ. ನಾನು ಪ್ರಜಾಪ್ರಭುತ್ವ, ಮತದಾನದ ಹಕ್ಕು, ಸಂವಿಧಾನವನ್ನು ಉಳಿಸುವ ವಿಚಾರವಾಗಿ ಮಾತನಾಡುತ್ತೇನೆ ಎಂದು ಉತ್ತರಿಸಿದರು.

**ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:**
**9538786812 / 9880655634**

# ಮದುವೆಯಾದ 8 ತಿಂಗಳಿಗೆ ಸಾವಿನ ಮನೆ ಸೇರಿದ ಪತಿ



**ಬೆಂಗಳೂರು:** ಪತ್ನಿ ಕಿರುಕುಳಕ್ಕೆ ಬೇಸತ್ತು ಪತಿ ಆತ್ಮಹತ್ಯೆಗೆ ಶರಣಾಗಿರುವಂತಹ ಘಟನೆ ಗಿರಿನಗರದಲ್ಲಿ ನಡೆದಿದೆ. ಗಗನ್ ರಾವ್ ನೇಣಿಗೆ ಶರಣಾದ ಪತಿ. ದಂಪತಿ ನಡುವೆ ನಿತ್ಯವೂ ಜಗಳ ನಡೆಯುತ್ತಿತ್ತು. ಪತ್ನಿ ಕಿರುಕುಳದಿಂದ ನೊಂದ ಗಗನ್ ರಾವ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಗಿರಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ನಡೆದದ್ದೇನು?**

ಬ್ಯಾಂಕ್‌ನಲ್ಲಿ ಕೆಲಸ ನಿರ್ವಹಿಸುತ್ತಿದ್ದ ಗಗನ್ ರಾವ್, ಎಂಟು ತಿಂಗಳ ಹಿಂದೆ ಮೇಘನಾ ಜತೆ ಮದುವೆಯಾಗಿದ್ದರು. ಮನೆಯಲ್ಲಿ ನಿತ್ಯ ದಂಪತಿ ನಡುವೆ ಜಗಳ ನಡೆಯುತ್ತಿತ್ತು. ಪತ್ನಿ ಕಿರುಕುಳ ದಿಂದಲೇ ಆತ್ಮಹತ್ಯೆ ಮಾಡಿಕೊಂಡಿರು ವುದಾಗಿ ಗಗನ್ ರಾವ್ ಸಹೋದರಿ ಮೇಘನಾ ವಿರುದ್ಧ ದೂರು ನೀಡಿದ್ದಾರೆ.

**ಪ್ರಿಯಕರನೊಂದಿಗೆ ಪತ್ನಿ ಪರಾರಿ: ಮರ್ಯಾದೆಗೆ ಅಂಜಿ ಪತಿ ಆತ್ಮಹತ್ಯೆಗೆ ಶರಣು**

ತನ್ನ ಹೆಂಡತಿ ಪ್ರಿಯಕರನೊಂದಿಗೆ ಪರಾರಿಯಾಗಿದ್ದಕ್ಕೆ ಮರ್ಯಾದೆಗೆ ಅಂಜಿದ ಗಂಡ ಹೆತ್ತ ಮಗಳನ್ನು ಕೊಂದು ಬಳಿಕ ತಾನೂ ಆತ್ಮಹತ್ಯೆಗೆ ಶರಣಾಗಿರುವಂತಹ ಹೃದಯ ವಿದ್ರಾವಕ ಘಟನೆಯೊಂದು ಇತ್ತೀಚೆಗೆ ಕೋಲಾರದಲ್ಲಿ ನಡೆದಿತ್ತು. ಪೊಲೀಸರು ಈಗಾಗಲೇ ಪತ್ನಿ ಹಾಗೂ ಪ್ರಿಯಕರನನ್ನು ಬಂಧಿಸಿದ್ದಾರೆ.

ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನ ಮುಡಿಯನೂರು ಗ್ರಾಮದ ಲೋಕೇಶ್ (37), ತಾನೇ ಹೆತ್ತು ಹೊತ್ತು ಸಾಕಿದ 4 ವರ್ಷದ ಕಂದಮ್ಮ ನಿಹಾರಿಕಾಳನ್ನ ಕೊಲೆಗೈದು, ಬಳಿಕ ತಾನೂ ನೇಣಿಗೆ ಕೊರಳೊಡ್ಡಿದ್ದರು. ಕೆಲ ತಿಂಗಳಿಂದ ಮಾನಸಿಕವಾಗಿ ಕುಗ್ಗಿ ಹೋಗಿದ್ದ ಲೋಕೇಶ್, ಕಡೆಗೆ ಆತ್ಮಹತ್ಯೆ ದಾರಿ ಹಿಡಿದಿದ್ದು, ಯಾರೂ ಊಹಿಸದ ದುರಂತ ಅಂತ್ಯಕಂಡಿದ್ದಾರೆ.

ಬಾಳಿಗೆ ಬೆಳಕಾಗಿ ಬಂದ ಹೆಂಡತಿಯೇ ಪ್ರಿಯಕರನ ಜೊತೆ ಓಡಿಹೋದ ವಿಚಾರ ತಿಳಿದ ಗಂಡ, ಮುಂದೆ ಕೇಳಿ ಬರಬಹುದಾದ ಟೀಕೆಗಳಿಗೆ ಉತ್ತರಿಸಲಾಗದೆ ಈ ಕಠಿಣ ನಿರ್ಧಾರಕ್ಕೆ ಕೈ ಹಾಕಿರಬಹುದು ಎಂದು ಮನೆಯವರ ಅಭಿಪ್ರಾಯವಾಗಿದೆ. ಮುಳಬಾಗಿಲು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

# ಹೂವಿನ ಮಾರ್ಕೆಟ್‌ಗಾಗಿ 942 ಮರಗಳ ಮಾರಣ ಹೋಮ



**ಬೆಂಗಳೂರು:** ಯಲಹಂಕ ಬಳಿಯ ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ರಾಜ್ಯ ಸರ್ಕಾರ ಐದು ಎಕರೆ ವಿಸ್ತೀರ್ಣದಲ್ಲಿ ಅಂತರರಾಷ್ಟ್ರೀಯ ಹೂವಿನ ಮಾರ್ಕೆಟ್ ಮಾಡಲು ಮುಂದಾಗಿದೆ. ಆದರೆ ಇದಕ್ಕೆ ವಿದ್ಯಾರ್ಥಿಗಳು ಮತ್ತು ಪರಿಸರ ಹೋರಾಟಗಾರರು ತೀವ್ರ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

**ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದ ವಿದ್ಯಾರ್ಥಿಗಳು**

ತೋಟಗಾರಿಕಾ ಇಲಾಖೆಯಿಂದ ಜಿಕೆವಿಕೆ ಕ್ಯಾಂಪಸ್ ನಲ್ಲಿ ಇಂಟರ್ನ್ಯಾಷನಲ್ ಫ್ಲವರ್ ಮಾರ್ಕೆಟ್ ಓಪನ್ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಆದರೆ ಇದಕ್ಕೆ ತೋಟಗಾರಿಕಾ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಸ್ಥಳೀಯ ನಿವಾಸಿಗಳು ಮತ್ತು ಪರಿಸರ ಹೋರಾಟಗಾರರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಹೂವಿನ ಮಾರುಕಟ್ಟೆಗಾಗಿ ಇಲಾಖೆ 942 ಮರಗಳ ಮಾರಣ ಹೋಮಕ್ಕೆ ಸಿದ್ಧತೆ ಮಾಡಿಕೊಂಡಿದ್ದು, ಮರಗಳನ್ನು ಕಡಿಯಬಾರದೆಂದು ಪರಿಸರವಾದಿಗಳು ಹೋರಾಟ ನಡೆಸುತ್ತಿದ್ದಾರೆ. ಆದರೆ ನವೆಂಬರ್ 3 ರಂದು ಎಪಿಎಂಸಿಯ ಅಧಿಕಾರಿಗಳು, ನಬಾರ್ಡ್ (ನ್ಯಾಷನಲ್ ಬ್ಯಾಂಕ್ ಫಾರ್ ಅಗ್ರಿಕಲ್ಚರ್ ಅಂಡ್ ರೂರಲ್ ಡೆವಲಪ್ಮೆಂಟ್) ಅಧಿಕಾರಿಗಳು ಕ್ಯಾಂಪಸ್ಗೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ ಎಂದು ತಿಳಿದುಬಂದಿದೆ. ಇದನ್ನು ವಿರೋಧಿಸಿರುವ ವಿದ್ಯಾರ್ಥಿಗಳು ಇಂದು ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಮರಗಳನ್ನು ಕಡಿಯದಂತೆ ಆನ್ಲೈನ್ ಕ್ಯಾಂಪೇನ್**

ಡಿಸೆಂಬರ್ ಒಳಗಾಗಿ ಹೊಸ ಮಾರುಕಟ್ಟೆಗಾಗಿ ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ತಿಳಿದು ಬಂದಿದ್ದು, ಮಾರುಕಟ್ಟೆ ಪ್ರಾಜೆಕ್ಟ್ ಕೈಬಿಡುವಂತೆ ವಿದ್ಯಾರ್ಥಿಗಳು ಮತ್ತು ಪರಿಸರ ಹೋರಾಟಗಾರರು ಪ್ರತಿಭಟನೆ ಮಾಡಿದ್ದಾರೆ. ಮರಗಳನ್ನು ಕಡಿಯದಂತೆ ಆನ್ಲೈನ್ ಕ್ಯಾಂಪೇನ್ ಮಾಡಿ 2 ಸಾವಿರಕ್ಕೂ ಅಧಿಕ ಸಹಿಗಳ ಸಂಗ್ರಹ ಮಾಡಲಾಗಿದೆ.

ವಿದ್ಯಾರ್ಥಿಗಳ ಶೈಕ್ಷಣಿಕ ದೃಷ್ಟಿಯಿಂದ ಬೆಳಸಲಾಗಿದ್ದ ಗೋಡಂಬಿ, ಮಾವು, ತೆಂಗು, ಹಲಸು ಸೇರಿ ವಿಶೇಷ ಮರಗಳಿಗೆ ಕೊಡಲಿ ಪೆಟ್ಟು ಬೀಳಲಿದ್ದು, ವಿದ್ಯಾರ್ಥಿಗಳು ಅಸಹಾಯಕತೆ ವ್ಯಕ್ತಪಡಿಸಿದ್ದಾರೆ. ಪ್ರಾಜೆಕ್ಟ್ ಕೈ ಬಿಡುವಂತೆ ಪರಿಸರ ಪ್ರೇಮಿಗಳು ಪಟ್ಟು ಹಿಡಿದಿದ್ದಾರೆ. ಒಂದು ವೇಳೆ ಜಿಕೆವಿಕೆ ಕ್ಯಾಂಪಸ್ನಲ್ಲಿ ಮಾರುಕಟ್ಟೆ ಬಂದರೆ ಸಂಕಷ್ಟ ಕಟ್ಟಿಟ್ಟಬುತ್ತಿ ಎಂದು ನಿವೃತ್ತ ಪ್ರಾಧ್ಯಾಪಕರು ಮತ್ತು ಸ್ಥಳೀಯ ನಿವಾಸಿ ಜಗದೀಶ್ ಹೇಳಿಕೆ ನೀಡಿದ್ದಾರೆ.

# ಆಟೋ ಪಲ್ಟಿಯಾಗಿ ಗಾಯಗೊಂಡ ಯುವಕ ಒದ್ದಾಡಿ ಸಾವು

**ಬೆಂಗಳೂರು:** ರಾಜಧಾನಿ ಬೆಂಗಳೂರಿನಲ್ಲಿ ಸರಕು ಸಾಗಣೆ ಆಟೋ ಚಾಲಕನ ನಿಯಂತ್ರಣ ತಪ್ಪಿ ವಾಹನ ಪಲ್ಟಿಯಾಗಿ ಯುವಕ ಗಂಭೀರವಾಗಿ ಗಾಯಗೊಂಡಿದ್ದರೂ, ಚಾಲಕ ಸ್ಥಳದಿಂದ ಪಲಾಯನ ಮಾಡಿದ್ದಾನೆ. ಗಾಯಗೊಂಡು ಯುವಕ ಒದ್ದಾಡಿ ಸಾವನ್ನಪ್ಪಿದ್ದಾನೆ.

ಈ ಅಪಘಾತವು ಬೆಂಗಳೂರಿನ ಮೈಕ್ರೋ ಲೇಔಟ್ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಸರಕು ಸಾಮಾಗ್ರಿಗಳನ್ನು ಸಾಗಿಸುತ್ತಿದ್ದ ಆಟೋ ರಿಕ್ಷಾ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ. ಈ ಸಮಯದಲ್ಲಿ ಚಾಲಕನ ಎಡಭಾಗದಲ್ಲಿ ಪ್ರಯಾಣಿಕ ಆಸನದಲ್ಲಿ ಕುಳಿತಿದ್ದ ಯುವಕನ ಮೇಲೆ ಆಟೋ ಬಿದ್ದು, ಅವನು ಗಂಭೀರವಾಗಿ ಗಾಯಗೊಂಡಿದ್ದಾನೆ.

ಘಟನೆಯ ನಂತರ ಸ್ಥಳೀಯ ನಿವಾಸಿಗಳ ನೆರವಿನಿಂದ ಆಟೋವನ್ನು ಮೇಲೆತ್ತಿ, ಗಾಯಗೊಂಡ ಯುವಕನನ್ನು ಫುಟ್‌ಪಾತ್ ಮೇಲೆ ಹಾಕಿದ್ದಾರೆ.ಆದರೆ, ಸ್ನೇಹಿತನ ಪರಿಸ್ಥಿತಿ ಕಂಡು ಆಟೋ ಚಾಲಕ ಪರಾರಿಯಾಗಿದ್ದಾರೆ ನಂತರ ಗಾಯಗೊಂಡ ಯುವಕನು ಒದ್ದಾಡಿ ಒದ್ದಾಡಿ ಪ್ರಾಣಬಿಟ್ಟಿದ್ದಾನೆ.

ಘಟನೆಯ ಬಗ್ಗೆ ಮಾಹಿತಿ ಬಂದ ನಂತರ, ಪೊಲೀಸರು ಸ್ಥಳಕ್ಕೆ ಧಾವಿಸಿದ್ದಾರೆ. ಮೃತ ವ್ಯಕ್ತಿಯ ಗುರುತು ಪತ್ತೆಯಾಗಿಲ್ಲ. ಪೊಲೀಸರು ಘಟನಾ ಸ್ಥಳದ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ, ಪಲಾಯನ ಮಾಡಿದ ಆಟೋ ಚಾಲಕನ ಪತ್ತೆಹಚ್ಚಲು ತನಿಖೆ ನಡೆಸುತ್ತಿದ್ದಾರೆ. ಈ ಘಟನೆಯಲ್ಲಿ ಚಾಲಕನ ವಿರುದ್ಧ ನಿರ್ಲಕ್ಷ್ಯದ ಆರೋಪದ ಹಿನ್ನೆಲೆಯಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು.

# ಮನೆ ಮೇಲ್ಛಾವಣಿ ಕುಸಿದು ಒಂದೇ ಕುಟುಂಬದ ಐವರು ದುರ್ಮರಣ



**ಬಿಹಾರ:** ಇಂದಿರಾ ಆವಾಸ್ ಯೋಜನೆಯಡಿ 30 ವರ್ಷಗಳ ಹಿಂದೆ ನಿರ್ಮಿಸಿದ್ದ ಮನೆಯ ಛಾವಣಿ ಕುಸಿದು ಮೂರು ಮಕ್ಕಳು ಸೇರಿ ಒಂದೇ ಕುಟುಂಬದ ಐವರು ಸಾವನ್ನಪ್ಪಿರುವ ಘಟನೆ ಬಿಹಾರದ (Bihar) ಸರನ್ (Saran) ಜಿಲ್ಲೆಯಲ್ಲಿ ನಡೆದಿದೆ.

ಮೃತರನ್ನು ಬಬ್ಲು ಖಾನ್ (32), ಪತ್ನಿ ರೋಷನ್ ಖಾತೂನ್ (30), ಮಗ ಮೊಹಮ್ಮದ್ ಚಂದ್ (10), ಮಗಳು ರುಕ್ಷಾರ್ (12) ಮತ್ತು ಅವರ ಕಿರಿಯ ಮಗಳು ಚಾಂದನಿ (2) ಎಂದು ಗುರುತಿಸಲಾಗಿದೆ.ಇದನ್ನೂ ಓದಿ: ಉತ್ತರ ಪ್ರದೇಶದ ಶಾಲೆ, ಕಾಲೇಜುಗಳಲ್ಲಿ ವಂದೇ ಮಾತರಂ ಗೀತೆ ಕಡ್ಡಾಯ: ಯೋಗಿ ಆದಿತ್ಯನಾಥ್

ಭಾನುವಾರ (ನ.9) ರಾತ್ರಿ 9:45ರ ಸುಮಾರಿಗೆ ಅವಘಡ ಸಂಭವಿಸಿದೆ. ಮೃತ ಐವರು ಮನೆಯಲ್ಲಿ ಮಲಗಿದ್ದರು. ಈ ವೇಳೆ ಛಾವಣಿ ಕುಸಿದಿದ್ದು, ಪರಿಣಾಮ ಒಂದೇ ಕುಟುಂಬದ ಐವರು ಸಾವನ್ನಪ್ಪಿದ್ದಾರೆ. ಮಾಹಿತಿ ತಿಳಿಯುತ್ತಿದ್ದಂತೆ ಘಟನಾ ಸ್ಥಳಕ್ಕೆ ಪೊಲೀಸರು ದೌಡಾಯಿಸಿದ್ದು, ಮೃತದೇಹಗಳನ್ನು ಹೊರತೆಗೆದು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ.

ಸ್ಥಳೀಯರ ಮಾಹಿತಿ ಪ್ರಕಾರ, ಭಾರೀ ಶಬ್ದ ಕೇಳಿಸಿದ ತಕ್ಷಣ ನಾವೆಲ್ಲ ಸ್ಥಳಕ್ಕೆ ಬಂದೆವು. ಈ ಮನೆಯನ್ನು ಇಂದಿರಾ ಆವಾಸ್ ಯೋಜನೆಯಡಿಯಲ್ಲಿ 30 ವರ್ಷಗಳ ಹಿಂದೆ ನಿರ್ಮಿಸಲಾಗಿತ್ತು. ಗೋಡೆ ಹಾಗೂ ಛಾವಣಿಯಲ್ಲಿ ಬಿರುಕು ಬಿಟ್ಟಿತ್ತು. ಆದರೆ ಕುಟುಂಬ ಆರ್ಥಿಕವಾಗಿ ದುರ್ಬಲವಾಗಿದ್ದ ಕಾರಣ, ಮನೆಯನ್ನು ಸರಿಪಡಿಸಲು ಸಾಧ್ಯವಾಗಿರಲಿಲ್ಲ ಎಂದಿದ್ದಾರೆ.


ಈ ಕುರಿತು ಸರನ್ ಎಸ್‌ಎಸ್‌ಪಿ ಕುಮಾರ್ ಆಶಿಶ್ ಮಾಹಿತಿ ನೀಡಿದ್ದು, ಮನೆ 30 ವರ್ಷಗಳಿಗಿಂತಲೂ ಹಳೆಯದಾಗಿದ್ದು, ಪರಿಣಾಮ ಛಾವಣಿ ಕುಸಿದಿದೆ. ಸದ್ಯ ಮೃತರ ಕುಟುಂಬಸ್ಥರಿಗೆ ಪರಿಹಾರ ನೀಡುವಂತೆ ಜಿಲ್ಲಾಡಳಿತಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಕಳುಹಿಸಲಾಗಿದೆ ಎಂದು ತಿಳಿಸಿದ್ದಾರೆ

# ಬೆಂಗಳೂರಿನಲ್ಲಿ ಫ್ಲೈಓವರ್ ಮೇಲಿಂದ ಜಿಗಿದು ವ್ಯಕ್ತಿ ಆತ್ಮಹತ್ಯೆ



**ಬೆಂಗಳೂರು:** ನಗರದ ಪಶ್ಚಿಮ ಭಾಗದ ನಾಯಂಡಹಳ್ಳಿ ಫ್ಲೈಓವರ್ ಬಳಿ ಇಂದು ಬೆಳಗಿನ ಜಾವ ನಡೆದ ಆತ್ಮಹತ್ಯೆ ಪ್ರಕರಣವು ಸ್ಥಳೀಯರನ್ನು ಬೆಚ್ಚಿಬೀಳಿಸಿದೆ. ಪಶ್ಚಿಮ ಬಂಗಾಳ ಮೂಲದ ಪ್ರಸಂಜಿತ್ ದಾಸ್ ಎಂಬ ವ್ಯಕ್ತಿ ಅತೀವ ವಿಷಾದಕರ ರೀತಿಯಲ್ಲಿ ಜೀವಬಲಿದಾನ ಮಾಡಿಕೊಂಡಿದ್ದಾರೆ. ಪ್ರಸಂಜಿತ್ ದಾಸ್ ಬೆಂಗಳೂರಿನಲ್ಲಿ ಕಳೆದ ಕೆಲವು ವರ್ಷಗಳಿಂದ ಕಾರ್ಮಿಕನಾಗಿ, ಮುಖ್ಯವಾಗಿ ಗಾರೆ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆಯ ಸಂದರ್ಭದಲ್ಲಿ ಪ್ರಸಂಜಿತ್ ತಮ್ಮ ಸ್ನೇಹಿತನೊಂದಿಗೆ ಆಟೋದಲ್ಲಿ ಪ್ರಯಾಣಿಸುತ್ತಿದ್ದರು. ನಾಯಂಡಹಳ್ಳಿ ಫ್ಲೈಓವರ್ ಹತ್ತಿರ ಬಂದಾಗ ಅವರು ಆಟೋ ನಿಲ್ಲಿಸಲು ಹೇಳಿ, ಕ್ಷಣಾರ್ಧದಲ್ಲಿ ಯಾವುದೇ ಮುನ್ನೋಟ ನೀಡದೆ ಮೇಲ್ಭಾಗದಿಂದ



ಕೆಳಗೆ ಜಿಗಿದಿದ್ದಾರೆ. ಅಚ್ಚರಿ ಘಟನೆ ನಡೆದ ತಕ್ಷಣ ಸ್ಥಳೀಯರು ಆತುರದಿಂದ ಸ್ಥಳಕ್ಕೆ ಧಾವಿಸಿದರೂ, ಅವರು ತೀವ್ರ ತಲಾ ಗಾಯಗಳಿಂದ ಸ್ಥಳದಲ್ಲೇ ಸಾವನ್ನಪ್ಪಿದ್ದರು.

ಬ್ಯಾಟರಾಯನಪುರ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಾಕ್ಷ್ಯ ಸಂಗ್ರಹ ಕಾರ್ಯ ಕೈಗೊಂಡಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ ಆತ್ಮಹತ್ಯೆಗೆ ಕಾರಣ ಇನ್ನೂ ಸ್ಪಷ್ಟವಾಗಿಲ್ಲ. ಪೊಲೀಸರು ಆತ್ಮಹತ್ಯೆಯ ಹಿಂದಿನ ವೈಯಕ್ತಿಕ, ಆರ್ಥಿಕ ಅಥವಾ ಮಾನಸಿಕ ಒತ್ತಡದ ಹಿನ್ನೆಲೆಗಳ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

ಪ್ರಸಂಜಿತ್ ದಾಸ್ ಅವರ ಸ್ನೇಹಿತ ಹಾಗೂ ಸ್ಥಳದಲ್ಲಿದ್ದ ಸಾಕ್ಷಿಗಳ ಹೇಳಿಕೆಗಳನ್ನು ದಾಖಲಿಸಿದ ಪೊಲೀಸರು, ಅಗತ್ಯವಾದ ಮಾಹಿತಿಗಳನ್ನು ಸಂಗ್ರಹಿಸಿ ಮೃತದೇಹವನ್ನು ವಿಕ್ಟೋರಿಯಾ ಆಸ್ಪತ್ರೆಯ ಶವಾಗಾರಕ್ಕೆ ರವಾನೆ ಮಾಡಿದ್ದಾರೆ. ಈ ಪ್ರಕರಣವನ್ನು ಅಸಹಜ ಸಾವು ಎಂದು ದಾಖಲಿಸಿಕೊಂಡು ಮುಂದಿನ ತನಿಖೆ ಮುಂದುವರಿಸಲಾಗಿದೆ.

**ನವೆಂಬರ್ 27 ರಂದು ನಿಮ್ಮ ಡಿಜಿಟಲ್ ವಾರ್ತೆ ದಿನಪತ್ರಿಕೆ**
**ಹಾಗೂ ಡಿಜಿಟಲ್ ವಾಹಿನಿ ನೂತನ ಕಚೇರಿ**
**ಉದ್ಘಾಟನೆಗೊಳ್ಳಲಿದ್ದು , ಸರ್ವರಿಗೂ ಆತ್ಮೀಯ ಆಮಂತ್ರಣ**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.